# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | ಸಂಚಿಕೆ – 74 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 27–09–2023 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 | Issue - 74 | Title- Code: KARKAN 28269 | Chitradurga | Date: 27-09-2023 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಪೂರ್ವಜರ ತ್ಯಾಗ ಪರಾಕ್ರಮದಿಂದ ಹಿಂದೂ ಸಮಾಜ ಉಳಿದಿದೆ: ಸೂರ್ಯನಾರಾಯಣ 2

ಏಕಾತ್ಮಕ ಮಾನವತವಾದದ ಪ್ರತಿಪಾದಕ ದೀನದಯಾಳ್ 3

ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆ ನೀಡಿ: ಡಿಹೆಚ್ಒ 4



ಸುದ್ದಿ, ಜಾಹಿರಾತಿಗೆ 9686622252


ಫಾಸ್ಟ್ ನ್ಯೂಸ್


WANTED
* Bsc nursing
* Ayah
* security
Keerti Hospital CHITRADURGA
8310396284


### ತಮಿಳುನಾಡಿಗೆ ಮತ್ತೆ 3 ಸಾವಿರ ಕ್ಯೂಸೆಕ್ ನೀರು CWRC ಆದೇಶ

» **ನವದೆಹಲಿ**

ತಮಿಳುನಾಡಿಗೆ ಕಾವೇರಿ ನೀರು ಬಿಡುವುದರ ವಿರುದ್ಧ ಬೆಂಗಳೂರಿನಲ್ಲಿ ಬಂದ್ ನಡೆಯುತ್ತಿರುವುದರ ಮಧ್ಯೆಯೇ ಕರ್ನಾಟಕ ಮತ್ತೆ ಸಂಕಷ್ಟಕ್ಕೆ ಸಿಲುಕಿದೆ. ದೆಹಲಿಯ ಕಾವೇರಿ ನೀರು ನಿಯಂತ್ರಣ ಸಮಿತಿ (CWRC) ಕಚೇರಿಯಲ್ಲಿ ಮಂಗಳವಾರ ನಡೆದ ಸಭೆಯಲ್ಲಿ ಕರ್ನಾಟಕಕ್ಕೆ ಆಘಾತಕಾರಿ ನಿರ್ಣಯ ಹೊರಬಿದ್ದಿದೆ.

ಪುಟ ↘ 2

### ಮಧ್ಯಂತರ ಬೆಳೆ ಪರಿಹಾರಕ್ಕೆ ಶಿಫಾರಸ್ಸು: ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ

# ಬರ: ಶೇ.80ಕ್ಕೂ ಹೆಚ್ಚು ಬೆಳೆ ಹಾನಿ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯಲ್ಲಿ ಸಂಪೂರ್ಣವಾಗಿ ಮಳೆಕೊರತೆಉಂಟಾಗಿದೆ.ಬರಆವರಿಸಿದ್ದು ಮಳೆ ಆಶ್ರಿತ ಬೆಳೆಗಳು ಶೇ.80 ರಿಂದ 100 ರಷ್ಟು ಹಾನಿಗೆ ಒಳಗಾಗಿವೆ. ಶೇ.25 ರಷ್ಟು ತುರ್ತು ಮಧ್ಯಂತರ ಪರಿಹಾರವನ್ನು ಬೆಳೆ ವಿಮೆ ಕಂಪನಿಗಳಿಂದ ನೀಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಹೇಳಿದರು.



ಈ ಕುರಿತು ಮಂಗಳವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳು, ಕೃಷಿ ವಿಜ್ಞಾನಿಗಳು, ಹವಮಾನ ತಜ್ಞರು, ವಿಮಾ ಕಂಪನಿ ಪ್ರತಿನಿಧಿಗಳು ಹಾಗೂ ಜಿಲ್ಲೆಯ ರೈತ ಮುಖಂಡರೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಸಂಪೂರ್ಣವಾಗಿ ಮಳೆ ಕೊರತೆ ಉಂಟಾಗಿದೆ. ರಾಜ್ಯ ಸರ್ಕಾರ ಬರ ಘೋಷಣೆಗೆ ತೀರ್ಮಾನ ಮಾಡಿದೆ. ಕೃಷಿ ಸಚಿವರು ಮಳೆ ಕೊರತೆಯಿಂದ ಬೆಳೆ ಹಾನಿ ಉಂಟಾದ ಜಿಲ್ಲೆಯ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪ್ರಮುಖ ಬೆಳೆಗಾಳದ ಶೇಂಗಾ, ಮುಸುಕಿನ ಜೋಳ, ಜೋಳ, ರಾಗಿ, ಸಿರಿಧಾನ್ಯಗಳು, ತೊಗರಿ, ಸೂರ್ಯಕಾಂತಿ, ಹತ್ತಿ, ಈರುಳ್ಳಿ ಸೇರಿದಂತೆ ಇತರೆ ತೋಟಗಾರಿಕೆ ಬೆಳೆಗಳು ಸಂಪೂರ್ಣವಾಗಿ ಹಾನಿಗೆ ಒಳಗಾಗಿವೆ. ಜಿಲ್ಲೆಯ ರೈತರ ಹಿತ ಕಾಯುವ ನಿಟ್ಟಿನಲ್ಲಿ ತಕ್ಷಣವೇ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿ ಶೇ.25 ರಷ್ಟು ಮಧ್ಯಂತರ ಬೆಳೆ ಪರಿಹಾರವನ್ನು ವಿಮಾ ಕಂಪನಿಗಳು ನೀಡುವಂತೆ ಶಿಫಾರಸ್ಸು ಮಾಡಲಾಗುವುದು. ರೈತರು ಈ ಕುರಿತು ಗೊಂದಲಗಳಿಗೆ ಒಳಗಾವುದು ಬೇಡ ಎಂದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಮಾತನಾಡಿ, ಜಿಲ್ಲೆಯಲ್ಲಿ ಮುಂಗಾರು ಮಳೆ ಕೊರತೆ ಉಂಟಾಗಿದೆ. ಜಿಲ್ಲೆಯ 2,98,150 ಹೆಕ್ಟೇರ್ ಕೃಷಿ ಭೂಮಿ ಪೈಕಿ 2,81,395 ಹೆಕ್ಟೇರ್ ಕೃಷಿ ಭೂಮಿಯಲ್ಲಿ ಬಿತ್ತನೆ ಕೈಗೊಳ್ಳಲಾಗಿದೆ. ಶೇ.94.38 ಬಿತ್ತನೆ ಪ್ರಮಾಣ ದಾಖಲಾಗಿದೆ. ಏಕದಳ ಧಾನ್ಯಗಳ ಪೈಕಿ 89,854 ಹೆಕ್ಟೇರ್ ಪ್ರದೇಶದಲ್ಲಿ ಮೆಕ್ಕೆಜೋಳ, ರಾಗಿ 35,883 ಹೆಕ್ಟೇರ್, ಸಜ್ಜೆ–19037 ಹೆಕ್ಟೇರ್ ಸೇರಿದಂತೆ ಇತರೆ ಸಿರಿಧಾನ್ಯಗಳು, ಅಲ್ಪ ಪ್ರಮಾಣದಲ್ಲಿ ಜೋಳ ಹಾಗೂ ಭತ್ತ ಬಿತ್ತನೆ ಮಾಡಲಾಗಿದೆ. ದ್ವಿದಳ ಬೆಳಗಳ ಪೈಕಿ 12,792 ಹೆಕ್ಟೇರ್ ತೊಗರಿ, 3407 ಹೆಕ್ಟೇರ್ ಹೆಸರು, 834 ಹೆಕ್ಟೇರ್ ಅವರೆ, 344 ಹೆಕ್ಟೇರ್ ಹುರುಳಿ, 317 ಹೆಕ್ಟೇರ್ ಅಲಸಂದಿ ಸೇರಿದಂತೆ ಅಲ್ಪ ಪ್ರಮಾಣದಲ್ಲಿ ಉದ್ದು, ಸೋಯಾಬಿನ್ ಬಿತ್ತನೆಯಾಗಿದೆ. ಎಣ್ಣೆ ಕಾಳುಗಳ ಪೈಕಿ 1,08,852 ಹೆಕ್ಟೇರ್ ಶೇಂಗಾ, 583 ಹೆಕ್ಟೇರ್ ಸೂರ್ಯಕಾಂತಿ, 274 ಹೆಕ್ಟೇರ್ ಹರಳು ಸೇರಿದಂತೆ ಅಲ್ಪಪ್ರಮಾಣದಲ್ಲಿ ಎಳ್ಳು ಬಿತ್ತನೆಯಾಗಿದೆ. ವಾಣಿಜ್ಯ ಬೆಳೆಯಾದ ಹತ್ತಿಯನ್ನು 8,715 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡಲಾಗಿದೆ. ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿ ಜಿಲ್ಲೆಯಲ್ಲಿ 83,606 ರೈತರು ನೊಂದಣಿ ಮಾಡಿಕೊಡಿದ್ದಾರೆ. ಒಟ್ಟು 11.92 ಕೋಟಿ ರೂಪಾಯಿ ಪ್ರೀಮಿಯಂ ಮೊತ್ತ ಪಾವತಿಸಲಾಗಿದೆ ಎಂದು ಸಭೆಯಲ್ಲಿ ಮಾಹಿತಿ ನೀಡಿದರು.

ಬಬ್ಬೂರು ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಓಂಕಾರಪ್ಪ ಮಾತನಾಡಿ, ಕೃಷಿ ಇಲಾಖೆಯ ಕೋರಿಕೆಯಂತೆ ಮಳೆ ಕೊರತೆಯಿಂದ ಉಂಟಾದ ಹಾನಿ ಬಗ್ಗೆ ಜಿಲ್ಲೆಯ ಆರು ತಾಲ್ಲೂಕುಗಳಲ್ಲಿ ಕೃಷಿ ವಿಜ್ಞಾನಿಗಳ ತಂಡ ಪರಿಶೀಲನೆ ನಡೆಸಿದೆ. ಚಳ್ಳಕೆರೆ ಭಾಗದಲ್ಲಿ ಶೇಂಗಾ ಬೆಳೆ ಸಂಪೂರ್ಣವಾಗಿ ವಿಫಲವಾಗಿದೆ. ಶೇಂಗಾ ಕಾಳುಗಟ್ಟಲು ಸಾಧ್ಯವೇ ಇಲ್ಲ. ಜಿಲ್ಲೆಯಲ್ಲಿ ಹೆಚ್ಚು ಬಿತ್ತನೆಯಾಗಿರುವ ಮಕ್ಕೆಜೋಳ 3 ಅಡಿ ಎತ್ತರ ಬೆಳೆದಿದ್ದರು, ಮಳೆ ಕೊರತೆಯಿಂದ ಕಾಳುಗಟ್ಟಿಲ್ಲ. ರೈತರು ರಾಗಿಯನ್ನು ಎರೆಡು ಬಾರಿ ಬಿತ್ತನೆ ಮಾಡಿದರು ಬೆಳೆ ಕೈಗೆ ಬರುವ ಯಾವ ಲಕ್ಷಣಗಳು ಇಲ್ಲ. ಮಳೆ ಕೊರತೆಯಿಂದ ಈರುಳ್ಳಿ ಸಹ ಬಾಧಿತವಾಗಿದೆ. ಜಿಲ್ಲೆಯಲ್ಲಿ ಶೇ.100 ರಷ್ಟು ಬೆಳೆ ಹಾನಿಯಾಗಿದೆ ಎಂದರು.

ತೋಟಗಾರಿಕೆ ಇಲಾಖೆ ಉಪನಿರ್ದೇಶಕಿ ಸವಿತಾ ಮಾತನಾಡಿ, ಚಿತ್ರದುರ್ಗ ತಾಲ್ಲೂಕು ತುರವನೂರು ಹೋಬಳಿ ಹುಣಸೆಕಟ್ಟೆ ಗ್ರಾಮದಲ್ಲಿ ಸೇವಂತಿ ಬೆಳೆ ನುಸಿರೋಗ ಬಾಧೆಯಿಂದ ಹಾನಿಗೆ ಒಳಗಾಗಿದೆ. ಹೊಸದುರ್ಗ ಹಾಗೂ ಹೊಳಲ್ಕೆರೆ ಭಾಗದಲ್ಲಿ ತೆಂಗಿನ ತೋಟದಲ್ಲಿ ಕಪ್ಪು ತಲೆ ಉಳುವಿನ ಬಾದೆ ಹೆಚ್ಚಾಗಿ ಕಂಡುಬರುತ್ತಿದೆ. ಈ ಎರಡು ಪ್ರಕರಣಗಳು ಕೀಟ ಬಾಧೆ ಆಗಿವೆ. ಇವನ್ನು ಪ್ರಕೃತಿ ವಿಕೋಪದಡಿ ಪರಿಗಣಿಸಲು ಸಾಧ್ಯವಿಲ್ಲ. ಸರ್ಕಾರ ಇದಕ್ಕಾಗಿ ವಿಶೇಷ ಪ್ಯಾಕೇಜ್ ಘೋಷಣೆ ಮಾಡುವ ನಿರೀಕ್ಷೆ ಇದೆ. ಇದರಲ್ಲಿ ಬೆಳೆಗೆ ಅಗತ್ಯ ಇರುವ ಔಷಧ ಹಾಗೂ ಪರಿಕರಗಳನ್ನು ರೈತರಿಗೆ ನೀಡಲಾಗುವುದು ಎಂದರು.

ಇದೇ ಸಂದರ್ಭದಲ್ಲಿ ರೈತರ ಖಾತೆಗೆ ಸರ್ಕಾರದಿಂದ ಪರಿಹಾರದ ರೂಪದಲ್ಲಿ ಜಮೆಯಾಗುವ ಮೊತ್ತವನ್ನು ಸಾಲಕ್ಕೆ ಕಟಾಯಿಸಿಕೊಳ್ಳಬಾರದು.

ಹಾಗೆಯೇ ರಾಜ್ಯ ಸರ್ಕಾರ ಜಾರಿ ತಂದಿರುವ ಗೃಹಲಕ್ಷ್ಮೀ ಸೇರಿದಂತೆ ಇತರೆ ಯೋಜನೆಗಳ ಹಣವನ್ನು ಸಹ ಸಾಲದ ಕಂತಿ ಜಮೆ ಮಾಡಿಕೊಳ್ಳದಂತೆ ಎಲ್ಲ ಬ್ಯಾಂಕ್‌ಗಳಿಗೆ ನಿರ್ದೇಶನ ನೀಡುವಂತೆ ಜಿಲ್ಲಾ ಲೀಡ್ ಬ್ಯಾಂಕ್ ವ್ಯವಸ್ಥಾಪಕ ತಿಪ್ಪೇಶ್ ಅವರಿಗೆ ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಸೂಚನೆ ನೀಡಿದರು. ಸಭೆಯಲ್ಲಿ ಕೃಷಿ ಇಲಾಖೆ ಉಪನಿರ್ದೇಶಕರಾದ ಪ್ರಭಾಕರ್, ಶಿವಕುಮಾರ್, ಸಹಾಯಕ ನಿರ್ದೇಶಕ ಚಂದ್ರಕುಮಾರ್, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಹನುಮಾನಾಯ್ಕ್, ರೈತ ಮುಖಂಡರಾದ ಕೆ.ಪಿ.ಭೂತಯ್ಯ, ಧನಂಜಯ, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಈಚಗಟ್ಟ ಸಿದ್ದವೀರಪ್ಪ ಇತರೆ ರೈತ ಮುಖಂಡರುಗಳು ಹಾಗೂ ವಿಮಾ ಕಂಪನಿ ಪ್ರತಿನಿಧಿಗಳು ಇದ್ದರು.

ಪ್ರಮುಖ ಸುದ್ದಿ

## ಓದಿನ ಜತೆಗೆ ಕ್ರೀಡೆಗೂ ಆದ್ಯತೆ ನೀಡಿ: ಎಸ್.ಜೆ.ಸೋಮಶೇಖರ್

### ಜಿಲ್ಲಾ ಮಟ್ಟದ ಕ್ರೀಡಾಕೂಟ ಹಾಗೂ ವಿಶೇಷ ಚೇತನ ಮಕ್ಕಳ ಮೇಲಾಟಗಳ ಕ್ರೀಡಾಕೂಟದಲ್ಲಿ ಜಿ.ಪಂ ಸಿಇಒ



» **ಚಿತ್ರದುರ್ಗ**

ವಿದ್ಯಾರ್ಥಿಗಳು ಓದಿನ ಜೊತೆಗೆ ಕ್ರೀಡೆಗೂ ಹೆಚ್ಚಿನ ಆದ್ಯತೆನೀಡಬೇಕು.ಕ್ರೀಡೆಯಲ್ಲಿಪಾಲ್ಗೊಳ್ಳುವುದರಿಂದ ವಿದ್ಯಾರ್ಥಿಗಳು ದೈಹಿಕ ಹಾಗೂ ಮಾನಸಿಕವಾಗಿ ಸದೃಢಗೊಳ್ಳುತ್ತಾರೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ಹೇಳಿದರು.

ನಗರದವೀರವನಿತೆಒನಕೆಓಬವ್ವಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಮಂಗಳವಾರ ಆಯೋಜಿಸಿದ್ದ 14, 17 ವರ್ಷ ವಯೋಮಿತಿಯೊಳಗಿನ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲಾ ಬಾಲಕ, ಬಾಲಕಿಯರ ಜಿಲ್ಲಾ ಮಟ್ಟದ ಕ್ರೀಡಾಕೂಟ ಹಾಗೂ ವಿಶೇಷ ಚೇತನ ಮಕ್ಕಳ ಮೇಲಾಟಗಳ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು.

ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಚಿತ್ರದುರ್ಗ ಜಿಲ್ಲೆ ರಾಜ್ಯಕ್ಕೆ ಮೊದಲನೇ ಸ್ಥಾನ ಪಡೆದಿದೆ. ಅದೇ ರೀತಿಯಾಗಿ ಕ್ರೀಡೆಯಲ್ಲೂ ರಾಜ್ಯಕ್ಕೆ ಮೊದಲನೇ ಸ್ಥಾನ ತರಬೇಕು. ಸೋಲು–ಗೆಲುವು ಮುಖ್ಯವಲ್ಲ. ಕ್ರೀಡೆಯಲ್ಲಿ ಪಾಲ್ಗೊಳ್ಳುವುದು ಮುಖ್ಯವಾಗಿರುತ್ತದೆ. ಕ್ರೀಡಾ ಕ್ಷೇತ್ರದಲ್ಲೂ ಹೆಚ್ಚಿನ ಸಾಧನೆ ಮಾಡಬಹುದು ಎಂದು ತಿಳಿಸಿದರು.

ಸಾಮಾಜಿಕ ಜಾಲತಾಣಗಳಿಂದ ವಿದ್ಯಾರ್ಥಿಗಳು ಕ್ರೀಡೆಯ ಬಗ್ಗೆ ಆಸಕ್ತಿ ಕಳೆದುಕೊಂಡಿದ್ದಾರೆ ಎಂದು ತಿಳಿಸಿದ ಅವರು, ಪ್ರತಿಯೊಬ್ಬ ವಿದ್ಯಾರ್ಥಿಯು ಕ್ರೀಡೆಯಲ್ಲಿ ಭಾಗವಹಿಸಿ ಜಿಲ್ಲೆ, ರಾಜ್ಯ, ರಾಷ್ಟ್ರಮಟ್ಟದವರೆಗೂ ಸಾಧನೆ ಮಾಡಬೇಕು ಎಂದು ಸಲಹೆ ನೀಡಿದರು. ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಮಾರುತೇಶ್ ಮಾತನಾಡಿ, ಸೋಲೇ ಗೆಲುವಿನ ಮೆಟ್ಟಿಲು. ಆದ್ದರಿಂದ ಕ್ರೀಡೆಯಲ್ಲಿ ಭಾಗವಹಿಸಿ ಮುಂದಿನ ದಿನಗಳಲ್ಲಿ ಉತ್ತಮ ಕ್ರೀಡಾಪಟುಗಳಾಗಿ ಬೆಳೆಯಬೇಕು. ವಿದ್ಯಾರ್ಥಿಗಳು ದೈಹಿಕ ಶಿಕ್ಷಣ ಶಿಕ್ಷಕರಿಂದ ಸರಿಯಾದ ರೀತಿಯಲ್ಲಿ ತರಬೇತಿ ಪಡೆದು, ರಾಷ್ಟ್ರ ಮತ್ತು ಅಂತರ ರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಬೇಕು ಎಂದು ಕಿವಿಮಾತು ಹೇಳಿದರು.

ಪುಟ ↘ 2




## ಫಾಸ್ಟ್ ನ್ಯೂಸ್

### ಓದಿನ ಜತೆಗೆ ಕ್ರೀಡೆಗೂ ಆದ್ಯತೆ ನೀಡಿ: ಎಸ್.ಜೆ.ಸೋಮಶೇಖರ್





» **ಮೊದಲ ಪುಟದಿಂದ**

ಜಿಲ್ಲಾಮಟ್ಟದ ಶಾಲಾ ಮಕ್ಕಳ ಪಂದ್ಯಾವಳಿಯಲ್ಲಿ ಜಿಲ್ಲೆಯ ಆರು ತಾಲ್ಲೂಕಿನ ಕ್ರೀಡಾಪಟುಗಳು ಭಾಗವಹಿಸದ್ದರು.ಮೊದಲ ದಿನದ ಕ್ರೀಡಾಕೂಟದಲ್ಲಿ ಜಿಲ್ಲಾ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್ ಕ್ರೀಡೆಗಳು ನಡೆದವು. ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್ ರೆಡ್ಡಿ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಕೆ.ಟಿ.ತಿಮ್ಮಾರೆಡ್ಡಿ, ಕಾರ್ಯಾಧ್ಯಕ್ಷ ಎಸ್.ವೀರಣ್ಣ, ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ನಾಗೇಂದ್ರಪ್ಪ, ಸಹ ಶಿಕ್ಷಕರ ಸಂಘದ ಅಧ್ಯಕ್ಷ ಶಿವಣ್ಣ, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಎ.ಪರಶುರಾಮಪ್ಪ ಸೇರಿದಂತೆ ದೈಹಿಕ ಶಿಕ್ಷಣ ಶಿಕ್ಷಕರು, ಜಿಲ್ಲಾ ಹಾಗೂ ತಾಲ್ಲೂಕು ಎಲ್ಲಾ ಸಂಘಗಳ ಅಧ್ಯಕ್ಷರು, ಕಾರ್ಯದರ್ಶಿಗಳು, ಪದಾಧಿಕಾರಿಗಳು ಹಾಗೂ ನಿರ್ದೇಶಕರುಗಳು ಮತ್ತು ಕ್ರೀಡಾಪಟುಗಳು ಇದ್ದರು.

### ಇವತ್ತಿನಷ್ಟು ಪೋಲಿಸರನ್ನ ಎಂದು ನೋಡಿರಲಿಲ್ಲ: ವಾಟಾಳ್ ನಾಗರಾಜ್

ಬೆಂಗಳೂರು: ಪ್ರತಿಭಟನೆ ನಡೆಸುವುದು ಪ್ರತಿಯೊಬ್ಬ ವ್ಯಕ್ತಿಯ ಜನ್ಮಸಿದ್ಧ ಹಕ್ಕು, ಕಾವೇರಿ ನದಿ ನೀರಿಗಾಗಿ ಹೋರಾಟ ನಡೆಸುತ್ತಿರುವ ರೈತರು ಏನು ಕಳ್ಳರೇ, ದೇಶದ್ರೋಹಿಗಳೇ? ಪೊಲೀಸರು ಅವರನ್ನು ಯಾಕೆ ಬಂಧಿಸುತ್ತಿದ್ದಾರೆ, ರೈತರು ತಮ್ಮ ಹಕ್ಕನ್ನು ಕೇಳುವುದು ತಪ್ಪಾ? ಇವತ್ತು ಎಲ್ಲಿ ನೋಡಿದರೂ ಪೊಲೀಸರು, ಸಿದ್ದರಾಮಯ್ಯ ಸರ್ಕಾರ ಕರ್ನಾಟಕವನ್ನು ಪೊಲೀಸ್ ರಾಜ್ಯವನ್ನಾಗಿ ಪರಿವರ್ತಿಸಿದೆ ಎಂದು ಕನ್ನಡ ಪರ ಹೋರಾಟಗಾರ ವಾಟಾಳ್ ನಾಗರಾಜ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ನಗರದಲ್ಲಿ ಟಿವಿ9 ಕನ್ನಡ ವಾಹಿನಿ ವರದಿಗಾರನೊಂದಿಗೆ ಮಾತಾಡಿದ ನಾಗರಾಜ್, ಸಿದ್ದರಾಮಯ್ಯ ಯಾರಪ್ಪನ ಮನೆ ನೀರು ಅಂತ ತಮಿಳುನಾಡುಗೆ ಹರಿಸಿದ್ದಾರೆ? ತಾವು 60 ವರ್ಷಗಳಿಂದ ಚಳುವಳಿಗಳನ್ನು ಮಾಡಿಕೊಂಡು ಬಂದಿದ್ದು ಇದುವರೆಗೆ ಸುಮಾರು 15,000 ಗಳಷ್ಟು ಚಳುವಳಿಗಳನ್ನು ನಡೆಸಿರುವು ಇವತ್ತು ನಗರದಲ್ಲಿ ಪ್ರತಿಬಂಧಕಾಜ್ಞೆಯನ್ನು ಜಾರಿಗೊಳಿಸುವ ಅಗತ್ಯವೇನಿತ್ತು? ಟೌನ್ ಹಾಲ್ ನಿಂದ ಫ್ರೀಡಂ ಪಾರ್ಕ್ ವರೆಗೆ ರೈತರು ರ‍್ಯಾಲಿ ನಡೆಸಲು ಅನುಮತಿ ನೀಡಿದ್ದರೆ ಆಕಾಶ ಕಳಚಿ ಬೀಳುತ್ತಿತ್ತೇ ಅಂತ ನಾಗರಾಜ್, ಸಿದ್ದರಾಮಯ್ಯ ಸರ್ಕಾರವನ್ನು ಜರಿದರು. ದಾಗಿ ಹೇಳಿದ ಅವರು ಇದಕ್ಕಿಂತ ಮೊದಲು ಯಾವತ್ತೂ ಈ ಪಾಟಿ ಪೊಲೀಸರನ್ನು ನೋಡಿರಲಿಲ್ಲ ಅಂತ ಹೇಳಿದರು. ಇವತ್ತು ನಗರದಲ್ಲಿ ಪ್ರತಿಬಂಧಕಾಜ್ಞೆಯನ್ನು ಜಾರಿಗೊಳಿಸುವ ಅಗತ್ಯವೇನಿತ್ತು? ಟೌನ್ ಹಾಲ್ ನಿಂದ ಫ್ರೀಡಂ ಪಾರ್ಕ್ ವರೆಗೆ ರೈತರು ರ‍್ಯಾಲಿ ನಡೆಸಲು ಅನುಮತಿ ನೀಡಿದ್ದರೆ ಆಕಾಶ ಕಳಚಿ ಬೀಳುತ್ತಿತ್ತೇ ಅಂತ ನಾಗರಾಜ್, ಸಿದ್ದರಾಮಯ್ಯ ಸರ್ಕಾರವನ್ನು ಜರಿದರು.

### ತಮಿಳುನಾಡಿಗೆ ಮತ್ತೆ 3 ಸಾವಿರ ಕ್ಯೂಸೆಕ್ ನೀರು CWRC ಆದೇಶ

» **ಮೊದಲ ಪುಟದಿಂದ**

ತಮಿಳುನಾಡಿಗೆ ಮುಂದಿನ 15 ದಿನಗಳಿಗೆ ಮತ್ತೆ 3 ಸಾವಿರ ಕ್ಯೂಸೆಕ್ ನೀರು ಹರಿಸುವಂತೆ ಸಮಿತಿಯು ಕರ್ನಾಟಕಕ್ಕೆ ಸೂಚನೆ ನೀಡಿದೆ. ಇದರೊಂದಿಗೆ ಕರ್ನಾಟಕದಲ್ಲಿ ಪ್ರತಿಭಟನೆಯ ಕಿಚ್ಚು ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ದಟ್ಟವಾಗಿದೆ. ಈಗಾಗಲೇ ರಾಜ್ಯ ರಾಜಧಾನಿ ಬೆಂಗಳೂರು, ಕಾವೇರಿ ಜಲಾನಯನ ಪ್ರದೇಶಗಳಾದ ಮಂಡ್ಯ, ಮೈಸೂರು ಜಿಲ್ಲೆಗಳಲ್ಲಿ ಪ್ರತಿಭಟನೆ ಜೋರಾಗಿದೆ.

**ಸಂಕಷ್ಟದ ಮಧ್ಯೆಯೂ ತುಸು ಸಮಾಧಾನ:** ಬಾರಿಯ ಆದೇಶವು ಸಂಕಷ್ಟದ ಮಧ್ಯೆಯೂ ಕರ್ನಾಟಕಕ್ಕೆ ತುಸು ಸಮಾಧಾನಕರ ಎನ್ನಲಾಗಿದೆ. ಈ ಹಿಂದಿನ ಆದೇಶಗಳಿಗಿಂತ ಕಡಿಮೆ ಪ್ರಮಾಣದಲ್ಲಿ ನೀರು ಬಿಡುಗಡೆಗೆ ಈ ಬಾರಿ ಆದೇಶ ನೀಡಲಾಗಿದೆ. ಮುಂದಿನ 15 ದಿನಗಳಿಗೆ ಮೂರು ಸಾವಿರ ಕ್ಯೂಸೆಕ್ ನೀರು ಹರಿಸುವಂತೆ ಆದೇಶ ನೀಡಲಾಗಿದೆ.

ಕಾವೇರಿ ಕೊಳ್ಳದಲ್ಲಿ ಶೇ 53 ಮಳೆ ಕೊರತೆ ಇದೆ. ಕರ್ನಾಟಕ 161 ತಾಲೂಕುಗಳನ್ನು ಬರ ಪೀಡಿತ ಎಂದು ಘೋಷಣೆ ಮಾಡಿದೆ. 34 ತಾಲೂಕುಗಳು ಭಾಗಶಃ ಬರಕ್ಕೆ ತುತ್ತಾಗಿವೆ. ಈ ಪರಿಸ್ಥಿತಿಯಲ್ಲಿ ಕಾವೇರಿ ನೀರು ಹರಿಸಲು ಸಾಧ್ಯವಿಲ್ಲ. ಜಲಾಶಯಗಳಲ್ಲಿ ನೀರಿಲ್ಲ, ನೀರು ಬಿಡಲು ಸಾಧ್ಯವಿಲ್ಲ ಎಂದು ಸಭೆಯಲ್ಲಿ ಕರ್ನಾಟಕದ ಅಧಿಕಾರಿಗಳು ವಾದ ಮಂಡಿಸಿದ್ದರು. ಇದನ್ನು ಆಲಿಸಿದ ನಂತರ, 3000 ಕ್ಯೂಸೆಕ್ ನೀರು ಹರಿಸುವಂತೆ ಆದೇಶ ನೀಡಲಾಗಿದೆ.

# ಪೂರ್ವಜರ ತ್ಯಾಗ ಪರಾಕ್ರಮದಿಂದ ಹಿಂದೂ ಸಮಾಜ ಉಳಿದಿದೆ: ಸೂರ್ಯನಾರಾಯಣ

» **ಚಿತ್ರದುರ್ಗ**

ಹಿಂದುತ್ವಕ್ಕೆ ಅಪಮಾನವಾದಾಗ ನಾವೆಲ್ಲಾ ಒಂದು ಎನ್ನುವ ಭಾವನೆ ಹಿಂದೂಗಳಲ್ಲಿ ಮೂಡಿಸುವುದಕ್ಕಾಗಿ ವಿಶ್ವಹಿಂದೂ ಪರಿಷತ್ ಕಳೆದ ಅರವತ್ತು ವರ್ಷಗಳಿಂದ ಕೆಲಸ ಮಾಡಿಕೊಂಡು ಬರುತ್ತಿದೆ ಎಂದು ಬಜರಂಗದಳದ ರಾಷ್ಟ್ರೀಯ ಸಹ ಸಂಯೋಜಕ ಸೂರ್ಯನಾರಾಯಣ ಹೇಳಿದರು.



ವಿಶ್ವಹಿಂದೂ ಪರಿಷತ್, ಬಜರಂಗದಳದ ವತಿಯಿಂದ ಹಿಂದೂ ಮಹಾ ಗಣಪತಿ ಪೆಂಡಾಲ್ ಬಳಿ ಸೋಮವಾರ ಶೌರ್ಯ ಜಾಗರಣ ರಥಯಾತ್ರೆ ಉದ್ಘಾಟಿಸಿ ಮಾತನಾಡಿದರು.

ವಿಶ್ವಹಿಂದೂ ಪರಿಷತ್‌ನ ಇತಿಯಾಸದಲ್ಲಿ ಇದು ಪ್ರಮುಖ ಯಾತ್ರೆ. ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣವಾಗಬೇಕೆಂಬ ಉದ್ದೇಶವಿಟ್ಟುಕೊಂಡು ಬಜರಂಗದಳ ಆರಂಭವಾಯಿತು. 1984 ರಲ್ಲಿ ರಥಯಾತ್ರೆ ನಡೆಸಿ ದೇಶದ ಹಿಂದೂ ಸಮಾಜವನ್ನು ಜಾಗೃತಗೊಳಿಸುವ ಕೆಲಸ ನಡೆಯಿತು. ಇದರಿಂದ ಯುವಕರಲ್ಲಿ ಕಿಚ್ಚು ನಿರ್ಮಾಣವಾಯಿತು. ದೇಶದ ಯುವಕರನ್ನುಸಂಘಟಿಸಿಧರ್ಮಾಭಿಮಾನ, ದೇಶಭಕ್ತಿ, ತುಂಬಲಾಗುತ್ತಿದೆ. 55 ಸಾವಿರ ಬಜರಂಗದಳದ ಘಟಕ ದೇಶದಲ್ಲಿ ಕೆಲಸ ಮಾಡುತ್ತಿದೆ. ಪೂರ್ವಜರ ತ್ಯಾಗ. ಪರಂಪರೆ. ಪರಾಕ್ರಮದಿಂದ ಹಿಂದೂ ಸಮಾಜ ಉಳಿದಿದೆ ಎನ್ನುವುದನ್ನು ಇಂದಿನ ಪೀಳಿಗೆಗೆ ಮನವರಿಕೆ ಮಾಡಿಕೊಡುವುದು ಶೌರ್ಯ ಜಾಗರಣ ರಥ ಯಾತ್ರೆಯ ಉದ್ದೇಶ ಎಂದು ತಿಳಿಸಿದರು.

ದೇಶವನ್ನು ಲೂಟಿ ಹೊಡೆದು, ದರೋಡೆ ಮಾಡಿ ಅತ್ಯಾಚಾರ ನಡೆಸಿದವರ ಇತಿಹಾಸವನ್ನು ಮಕ್ಕಳು ಪಠ್ಯದಲ್ಲಿ ಓದುವಂತ ದುರ್ಗತಿ ಬಂದಿರುವುದನ್ನು ಸಹಿಸಿಕೊಂಡು ಹಿಂದೂ ಸಮಾಜ ಸುಮ್ಮನೆ ಕೂರುವುದಿಲ್ಲ. ಇದು ಬದಲಾಗಬೇಕು. ದೇಶದಲ್ಲಿ ಆಗುತ್ತಿರುವ ಅಪಮಾನ, ಆಕ್ರಮಣ ಮೆಟ್ಟಿನಿಲ್ಲಬೇಕಾಗಿರುವುದರಿಂದ ಯುವಕರಲ್ಲಿ ಸ್ವಾಭಿಮಾನ, ಜಾಗೃತಿ ಮೂಡಿಸುವುದು ನಮ್ಮ ಕೆಲಸ. ಯುವ ಸಮೂಹ ನಾಶ ಮಾಡಲು ಡ್ರಗ್ ಜಿಹಾದ್ ಹುಟ್ಟಿಕೊಂಡಿದೆ. ಧರ್ಮ ವಿರೋಧಿ, ರಾಷ್ಟ್ರ ವಿರೋಧಿಗಳ ಕೈವಾಡ ಇದರಲ್ಲಿ ಕಾಣುತ್ತಿದೆ. ದೇಶಾದ್ಯಂತ ಡ್ರಗ್ ಜಾಲ ವ್ಯಾಪಿಸಿದೆ. ಹಾಗಾಗಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಶೌರ್ಯ ಜಾಗರಣ ರಥಯಾತ್ರೆ ಸಂಚರಿಸಿ ಅ.14 ರಂದು ದೇಶದಲ್ಲಿ ಸಮಾಪ್ತಿಯಾಗಲಿದೆ ಎಂದು ಹೇಳಿದರು.

ತುಕಡೆ ಗ್ಯಾಂಗ್‌ಗಳ ಮೂಲಕ ಹಿಂದೂ ಯುವಕರನ್ನು ದಿಕ್ಕುತಪ್ಪಿಸುವ ಕೆಲಸ ಹತ್ತಾರು ವಿಶ್ವವಿದ್ಯಾನಿಲಯಗಳಲ್ಲಿ ನಡೆಯುತ್ತಿದೆ. ಹಿಂದೂ ಸಮಾಜ ಜಾಗೃತವಾಗಬೇಕು. ಲಕ್ಷಾಂತರ ಹಿಂದೂಗಳು ಧರ್ಮ ಬಿಟ್ಟು ಹೋಗುತ್ತಿರುವುದನ್ನು ತಡೆಯಬೇಕಿದೆ ಎಂದು ಹಿಂದೂ ಯುವಕರನ್ನು ಎಚ್ಚರಿಸಿದರು.ಕರ್ನಾಟಕ ದಕ್ಷಿಣ ವಿಶ್ವಹಿಂದೂ ಪರಿಷತ್ ಪ್ರಾಂತ ಕಾರ್ಯದರ್ಶಿ ಜಗನ್ನಾಥಶಾಸ್ತ್ರಿ ಮಾತನಾಡಿ 59 ವರ್ಷಗಳನ್ನು ಪೂರೈಸಿ ವಿಶ್ವಹಿಂದೂ ಪರಿಷತ್ 60 ನೇ ವರ್ಷಕ್ಕೆ ಕಾಲಿಟ್ಟಿದೆ. ಶತಶತಮಾನಗಳಿಂದ ಹಿಂದೂ ಸಮಾಜ ಅನುಭವಿಸಿಕೊಂಡು ಬರುತ್ತಿರುವ ಸಮಸ್ಯೆಗಳಿಗೆಪೂರ್ಣಪ್ರಮಾಣದಪರಿಹಾರ ಕಂಡುಕೊಳ್ಳುವ ಪ್ರಯತ್ನ ಮಾಡುತ್ತಿದ್ದು, ಯಶಸ್ವಿಯೂ ಆಗಿದೆ. ಭಾರತದ ಮೇಲೆ ಆಕ್ರಮಣ ದಾಳಿಯಾದರೂ ಸನಾತನ ಹಿಂದೂ ಧರ್ಮ ಉಳಿದಿದೆ. 1528 ರಲ್ಲಿ ಅಯೋಧ್ಯೆಯಲ್ಲಿ ರಾಮಮಂದಿರವನ್ನು ಕೆಡವಲಾಯಿತು. ನಮ್ಮದು ಸೋಲಿನ ಇತಿಹಾಸವಲ್ಲ. ಪರಾಕ್ರಮದ ಇತಿಹಾಸ ಎನ್ನುವುದನ್ನು ಹಿಂದೂ ಸಮಾಜಕ್ಕೆ ತಿಳಿಸುವುದಕ್ಕಾಗಿ ದೇಶಾದ್ಯಂತ ಶೌರ್ಯ ಜಾಗರಣ ರಥಯಾತ್ರೆ ಸಂಚರಿಸುತ್ತಿದೆ. ಅ.10 ರಂದು ರಾಜ್ಯದ ಉಡುಪಿಯಲ್ಲಿ ಮುಕ್ತಾಯಗೊಳ್ಳಲಿದೆ ಎಂದರು.ಮಾದಾರ ಚನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚನ್ನಯ್ಯಸ್ವಾಮೀಜಿ ಮಾತನಾಡಿ ಸಮಾಜದಲ್ಲಿ ಜಾತಿ ಜಾತಿಗಳ ನಡುವೆಯಿರುವ ವರ್ಗ ತಾರತಮ್ಯವನ್ನು ನಿವಾರಿಸಿ ಸಾಮರಸ್ಯ ಮೂಡಿಸುವ ಕೆಲಸವಾಗಬೇಕಿದೆ. ದಲಿತರಷ್ಟೆ ಮತಾಂತರವಾಗುತ್ತಿಲ್ಲ.ಎಲ್ಲಾ ಜಾತಿಯಲ್ಲೂ ಮತಾಂತರವಾಗುತ್ತಿದೆ. ದಲಿತರು ದೇವಾಲಯಗಳಲ್ಲಿ ಪ್ರವೇಶಿಸುವಂತಿಲ್ಲ. ಜಾತಿ ತಾರತಮ್ಯ ತೊಲಗಬೇಕು. ಆಗ ಮಾತ್ರ ಮತಾಂತರ ನಿಯಂತ್ರಣಗೊಂಡು ಸನಾತನ ಧರ್ಮ ಗಟ್ಟಿಯಾಗಲಿದೆ ಎಂದು ಹೇಳಿದರು.

ವಿಶ್ವಹಿಂದೂ ಪರಿಷತ್ ಅರವತ್ತು ವರ್ಷಗಳಿಂದ ಅನೇಕ ಏಳುಬೀಳುಗಳನ್ನು ಎದುರಿಸಿ ಧರ್ಮದ ಉಳಿವಿಗಾಗಿ ಹೋರಾಟ ಮಾಡಿಕೊಂಡು ಬರುತ್ತಿದೆ. ಸಾಮರಸ್ಯ ಸಹಬಾಳ್ವೆಗೆ ಒತ್ತು ಕೊಡುವ ಅಗತ್ಯವಿದೆ ಎಂದು ಸಲಹೆ ನೀಡಿದರು.

ಬಜರಂಗದಳ ಪ್ರಾಂತ್ಯ ಸಂಯೋಜಕ ಸುನೀಲ್ ಕೆ.ಆರ್. ಮಾತನಾಡುತ್ತ ವಿಶ್ವಹಿಂದೂ ಪರಿಷತ್ ಬಜರಂಗದಳ ಹಿಂದೂಗಳನ್ನು ಸ್ವಾಭಿಮಾನಿಗಳನ್ನಾಗಿ ಮಾಡುವ ಕೆಲಸ ಹಿಂದಿನಿಂದಲೂ ಮಾಡುತ್ತಿದೆ. ತ್ಯಾಗದ ಪರಂಪರೆ ನಮ್ಮದು ಎನ್ನುವುದನ್ನು ಇಂದಿನ ಪೀಳಿಗೆಗೆ ತಿಳಿಸಬೇಕಿದೆ. ಅನ್ಯಧರ್ಮೀಯರಿಂದ ಹಿಂದೂ ಧರ್ಮದ ಮೇಲೆ ಅನೇಕ ಆಕ್ರಮಣಗಳಾಗಿವೆ. ಇಸ್ಲಾಂ, ಕ್ರೈಸ್ತರ ದಾಳಿಯನ್ನು ಶೌರ್ಯ, ತ್ಯಾಗದ ಮೂಲಕ ನಮ್ಮ ಹಿರಿಯರು ಎದುರಿಸಿದ್ದಾರೆ. ಹಿಂದೂ ಸಮಾಜದ ಯುವಕರನ್ನು ಬಡಿದೆಬ್ಬಿಸುವುದಕ್ಕಾಗಿ ಶೌರ್ಯ ಜಾಗರಣ ರಥಯಾತ್ರೆದೇಶಾದ್ಯಂತ ಆರಂಭಗೊಂಡಿದೆ ಎಂದು ನುಡಿದರು.

ಬಂಜಾರ ಗುರುಪೀಠದ ಸರ್ದಾರ್ ಸೇವಾಲಾಲ್ ಸ್ವಾಮೀಜಿ, ವಿಶ್ವಹಿಂದೂ ಪರಿಷತ್ ಕೇಂದ್ರೀಯ ಜಂಟಿ ಕಾರ್ಯದರ್ಶಿ ಸ್ಥಾಣು ಮಾಲಯನ್, ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಕರ್ನಾಟಕ ದಕ್ಷಿಣ ಪ್ರಾಂತ ಸಹ ಕಾರ್ಯವಾಹಕ ಪಟ್ಟಾಭಿರಾಮ, ಶೌರ್ಯ ಜಾಗರಣ ರಥಯಾತ್ರೆ ಸಮಿತಿ ಅಧ್ಯಕ್ಷ ಜಿ.ಎಂ.ಸುರೇಶ್, ಕರ್ನಾಟಕ ದಕ್ಷಿಣ ಶೌರ್ಯ ಜಾಗರಣ ರಥಯಾತ್ರೆ ಪ್ರಾಂತ ಸಮಿತಿ ಸದಸ್ಯ ಟಿ.ಬದರಿನಾಥ್ ವೇದಿಕೆಯಲ್ಲಿದ್ದರು.

# ವಿವಿಧ ಬೇಡಿಕೆ ಈಡೇರಿಸುವಂತೆ ರಾಜ್ಯ ರೈತ ಸಂಘ, ಹಸಿರುಸೇನೆಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ

» **ಚಿತ್ರದುರ್ಗ**

ಮಳೆಯ ಅಭಾವದಿಂದ ಕೃಷಿ ಮತ್ತು ತೋಟಗಾರಿಕೆ ಬೆಳೆಗಳು ಒಣಗುತ್ತಿರುವುದರಿಂದ ರಾಜ್ಯಾದ್ಯಂತ ಬರಗಾಲವೆಂದು ಘೋಷಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಸೋಮವಾರ ಧರಣಿ ನಡೆಸಿ ಜಿಲ್ಲಾಡಳಿತದ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು.



ಮಳೆ-ಬೆಳೆಯಿಲ್ಲದೆ ಸಂಕಷ್ಟಕ್ಕೆ ತುತ್ತಾಗಿರುವ ರೈತರಿಗೆ ಎಕರೆಗೆ ಇಪ್ಪತ್ತೈದು ಸಾವಿರ ರೂ.ಗಳ ಪರಿಹಾರ ಘೋಷಿಸಿ ಜನ-ಜಾನುವಾರುಗಳಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಬೇಕೆಂದು ಧರಣಿನಿರತ ರೈತರು ಸರ್ಕಾರದ ವಿರುದ್ಧ ಧಿಕ್ಕಾರಗಳನ್ನು ಕೂಗಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ರಾಜ್ಯ ಕಾರ್ಯಾಧ್ಯಕ್ಷ ಈಚಘಟ್ಟದ ಸಿದ್ದವೀರಪ್ಪ ಚಿತ್ರದುರ್ಗ ಜಿಲ್ಲೆ ನಿರಂತರ ಬರಗಾಲಕ್ಕೆ ತುತ್ತಾಗುತ್ತಿರುವುದರಿಂದ ಭದ್ರಾಮೇಲ್ದಂಡೆ ಯೋಜನೆಯನ್ನು ತ್ವರಿತವಾಗಿ ಪೂರ್ಣಗೊಳಿಸಿ ರೈತರ ಹೊಲಗಳಿಗೆ ನೀರು ಹರಿಸುವ ಕೆಲಸವಾಗಬೇಕಿದೆ. ಈ ನಿಟ್ಟಿನಲ್ಲಿ ಸರ್ಕಾರ ಗಂಭೀರವಾಗಿ ಚಿಂತಿಸಿ ರೈತರ ನೆರವಿಗೆ ನಿಲ್ಲಬೇಕು ಎಂದು ಒತ್ತಾಯಿಸಿದರು.

ನೂರು ವರ್ಷಗಳಲ್ಲಿ 60 ವರ್ಷಗಳ ಕಾಲ ಜಿಲ್ಲೆ ಬರಗಾಲವನ್ನು ಕಂಡಿದೆ. 1974 ರಲ್ಲಿ ಕಂಡಂತ ಬರಗಾಲ 49 ವರ್ಷದ ನಂತರ ಮತ್ತೆ ಮರುಕಳಿಸಿದೆ. ಸಿರಿಗೆರೆಯ ಡಾ.ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳ ಕಾಳಜಿಯಿಂದ ಭರಮಸಾಗರ ಸುತ್ತಮುತ್ತಲಿನ ಎಲ್ಲಾ ಕೆರೆಗಳಿಗೆ ನೀರು ತುಂಬಿಸುವ ಕೆಲಸವಾಗಿದೆ. ಅದೇ ರೀತಿ ಜಿಲ್ಲೆಯ ಎಲ್ಲಾ ಮಠಾಧೀಶರುಗಳು ನಿರ್ಧಾರ ತೆಗೆದುಕೊಂಡು ಕೆರೆಗಳಿಗೆ ನೀರು ತುಂಬಿಸಿದಾಗ ಮಾತ್ರ ಬರಗಾಲದಿಂದ ರೈತರು ಬಚಾವಾಗಬಹುದು. ಕೆರೆ ಇಲ್ಲದ ಹಳ್ಳಿಗಳಿಗೆ ಹಾಗೂ ಕೆರೆಯ ಮೇಲ್ಭಾಗದಲ್ಲಿರುವ ಗ್ರಾಮಗಳಿಗೆ ಭದ್ರಾಮೇಲ್ದಂಡೆ ಯೋಜನೆಯಿಂದ ನೀರು ಹರಿಯಬೇಕು. ಹಿರಿಯೂರಿನ ವಾಣಿವಿಲಾಸ ಸಾಗರಕ್ಕೆ ಭದ್ರಾ ಯೋಜನೆಯಿಂದ ನೀರು ಸಂಗ್ರಹಿಸಿಕೊಂಡರೆ ಎಲ್ಲಾ ಕೆರೆಗಳಿಗೆ ನೀರು ಹರಿಸಲು ನೆರವಾಗುತ್ತದೆ. ಇಡೀ ಜಿಲ್ಲೆಯನ್ನು ಸಂಪೂರ್ಣ ನೀರಾವರಿ ಪ್ರದೇಶವನ್ನಾಗಿಸಬೇಕಾದರೆ ಭದ್ರಾಮೇಲ್ದಂಡೆ ಯೋಜನೆ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕು ಎಂದು ಆಗ್ರಹಿಸಿದರು.

ನೀರಾವರಿ ಪಂಪ್‌ಸೆಟ್‌ಗಳಿಗೆ ಹಗಲಿನಲ್ಲಿ ಗುಣಮಟ್ಟದ ಏಳು ಗಂಟೆ ವಿದ್ಯುತ್ ಪೂರೈಸಬೇಕು. ಅಕ್ರಮ ಸಕ್ರಮದಡಿಯಲ್ಲಿ ಹಣ ಪಾವತಿಸಿರುವ ರೈತರ ಪಂಪ್‌ಸೆಟ್‌ಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ರೈತರ ಎಲ್ಲಾ ಸಾಲ ವಸೂಲಾತಿಯನ್ನು ನಿಲ್ಲಿಸಿ ಸಂಪೂರ್ಣ ಸಾಲ ಮನ್ನಾ ಮಾಡಬೇಕು. ಕೆ.ಇ.ಆರ್.ಸಿ. ಪಂಪ್‌ಸೆಟ್‌ಗಳ ಆರ್.ಆರ್.ನಂಬರ್‌ಗಳಿಗೆ ಆಧಾರ್ ಜೋಡಣೆ ಕಡ್ಡಾಯಗೊಳಿಸಿರುವುದನ್ನು ಹಿಂದಕ್ಕೆ ಪಡೆಯಬೇಕು. ಅರಣ್ಯ ಇಲಾಖೆ ರೈತರನ್ನು ಒಕ್ಕಲೆಬ್ಬಿಸುತ್ತಿರುವುದನ್ನು ತಕ್ಷಣ ನಿಲ್ಲಿಸಬೇಕು. ಅರಣ್ಯ ಕಾಯಿದೆಗೆ ತಿದ್ದುಪಡಿ ತಂದು ರೈತರಿಗೆ ಸಾಗುವಳಿ ಪತ್ರ ಕೊಡಬೇಕು. ಕೆಂಪುತಲೆ ಹುಳುವಿನ ಭಾದೆಗೆ ಒಳಗಾಗಿರುವ ತೆಂಗಿನ ತೋಟಗಳಿಗೆ ಅಗತ್ಯ ಚಿಕಿತ್ಸೆಯನ್ನು ತುರ್ತಾಗಿ ಒದಗಿಸಿ ರೈತರನ್ನು ಸಂಕಷ್ಟದಿಂದ ಪಾರು ಮಾಡಬೇಕೆಂದು ಧರಣಿನಿರತರು ಸರ್ಕಾರಕ್ಕೆ ಮನವಿ ಮಾಡಿದರು.ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಜಿಲ್ಲಾಧ್ಯಕ್ಷ ಡಿ.ಎಸ್.ಹಳ್ಳಿ ಮಲ್ಲಿಕಾರ್ಜುನ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮರೆಡ್ಡಿ, ಅಖಂಡ ಕರ್ನಾಟಕ ರೈತ ಸಂಘದ ಸಿದ್ದಪ್ಪ, ರೈತ ಮುಖಂಡರುಗಳಾದ ಸಂಜೀವಪ್ಪ, ಆರ್.ಬಿ.ಲೋಕಣ್ಣ, ಎಸ್.ಮಹದೇವಪ್ಪ, ನಾಗಪ್ಪ, ಪಿ.ಆರ್.ಮಾರುತಿ,ಸಿ.ಆರ್.ಜಯಪ್ಪ,ದಿವ್ಯಜ್ಯೋತಿ, ಹೆಚ್.ಬಸವರಾಜಪ್ಪ, ಜಿ.ಕೆ.ನಾಗರಾಜ್, ಸದಾಶಿವಪ್ಪ, ಕೆ.ಸಿ.ಪರಮೇಶ್ವರಪ್ಪ, ನಿಜಲಿಂಗಪ್ಪ, ರಾಜಶೇಖರಪ್ಪ, ಶೇಷಣ್ಣರೆಡ್ಡಿ, ರೇವಣಸಿದ್ದಪ್ಪ, ನರಸಿಂಹಪ್ಪ, ವೇದಮೂರ್ತಿ, ರವಿ, ಕರಿಯಪ್ಪ, ಶಂಕರಮೂರ್ತಿ, ಹರೀಶ್, ಗಿರೀಶ್ ಸೇರಿದಂತೆ ನೂರಾರು ರೈತ ಮಹಿಳೆಯರು ಧರಣಿಯಲ್ಲಿ ಭಾಗವಹಿಸಿದ್ದರು.

# ಸಾರಿಗೆ ಬಸ್‌ಗಳ ಸಂಚಾರಕ್ಕೆ ಅವಕಾಶ ನೀಡದಂತೆ ಕರುನಾಡ ವಿಜಯಸೇನೆಯಿಂದ ಪ್ರತಿಭಟನೆ



» **ಚಿತ್ರದುರ್ಗ**

ಕರ್ನಾಟಕದ ರೈತರ ಜೀವನಾಡಿ ಕಾವೇರಿ ನೀರನ್ನು ತಮಿಳುನಾಡಿಗೆ ಹರಿಸುತ್ತಿರುವ ರಾಜ್ಯ ಸರ್ಕಾರದ ರೈತ ವಿರೋಧಿ ನೀತಿಯನ್ನು ಖಂಡಿಸಿ ಸೆ.26 ರ ಇಂದು ಬೆಂಗಳೂರು ಬಂದ್‌ಗೆ ಕರೆ ನೀಡಿರುವುದನ್ನು ಬೆಂಬಲಿಸಿ ಕರುನಾಡ ವಿಜಯಸೇನೆಯಿಂದ ಇಲ್ಲಿನ ಕೆ.ಎಸ್.ಆರ್.ಟಿ.ಸಿ. ಬಸ್‌ನಿಲ್ದಾಣದಲ್ಲಿ ಸರ್ಕಾರಿ ಬಸ್‌ಗಳಿಗೆ ಸ್ಟಿಕರ್ ಅಂಟಿಸುವ ಮೂಲಕ ಚಿತ್ರದುರ್ಗ ಘಟಕದಿಂದ ಬಸ್‌ಗಳ ಸಂಚಾರ ಆರಂಭಿಸಬಾರದೆಂದು ಪ್ರತಿಭಟಿಸಲಾಯಿತು.ಬೆಂಗಳೂರಿಗೆ ಸಂಚರಿಸುವ ಎಲ್ಲಾ ಸರ್ಕಾರಿ ಬಸ್‌ಗಳನ್ನು ಟೋಲ್‌ಗಳಲ್ಲಿ ತಡೆಯಬೇಕು. ಸರ್ಕಾರ ಹಾಗೂ ಕಾವೇರಿ ನದಿ ನೀರು ಪ್ರಾಧಿಕಾರದ ವಿರುದ್ಧ ಬೆಂಗಳೂರು ಬಂದ್‌ಗೆ ಕರೆ ನೀಡಿರುವುದಕ್ಕೆ ನಮ್ಮ ಸಂಪೂರ್ಣ ಬೆಂಬಲವಿದೆ ಎಂದು ಪ್ರತಿಭಟನಾಕಾರರು ಧಿಕ್ಕಾರಗಳನ್ನು ಕೂಗಿದರು.ವಿಶೇಷ ಹಾಗೂ ತುರ್ತು ಸೇವೆಗಳಿಗೆ ಸಂಬಂಧಿಸಿದಂತೆ ಅಂಬ್ಯುಲೆನ್ಸ್‌ಗಳಿಗೆ ಮಾತ್ರ ನಮ್ಮ ಸಂಘಟನೆ ಅವಕಾಶ ನೀಡುತ್ತದೆ. ಪದೆ ಪದೆ ರಾಜ್ಯ ಬಂದ್ ಮಾಡುವುದರಿಂದ ಬಡ ಕೂಲಿ ಕಾರ್ಮಿಕರಿಗೆ, ವಿದ್ಯಾರ್ಥಿಗಳಿಗೆ, ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ರಾಜ್ಯ ಸರ್ಕಾರ ಇದಕ್ಕೆ ಅವಕಾಶ ನೀಡದಂತೆ ಕೂಡಲೆ ಕಾವೇರಿ ನೀರಿನ ಸಮಸ್ಯೆಯನ್ನು ಬಗೆಹರಿಸಿಕೊಳ್ಳುವತ್ತ ವಿಶೇಷ ಗಮನ ಕೊಡಬೇಕೆಂದು ಪ್ರತಿಭಟನೆಯ ನೇತೃತ್ವ ವಹಿಸಿದ್ದ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಒತ್ತಾಯಿಸಿದರು.ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ, ವಿಶ್ವನಾರಾಯಣಮೂರ್ತಿ, ಜಗದೀಶ್, ಮಣಿಕಂಠ, ಅಖಿಲೇಶ್, ಮಹಮದ್‌ರಫಿ, ರತ್ನಮ್ಮ, ಪ್ರದೀಪ್ ಆರ್. ಅವಿನಾಶ್, ಅಭಿಷೇಕ್, ನಾಗರಾಜ್ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಪ್ರಮುಖ ಸುದ್ದಿ

### ತಾಲ್ಲೂಕು ಮಟ್ಟದ ಪದವಿ ಪೂರ್ವ ಕಾಲೇಜುಗಳ ಸಾಂಸ್ಕೃತಿಕ ಚಟುವಟಿಕೆ

# ವಿದ್ಯಾರ್ಥಿಗಳು ಪಠ್ಯೇತರ ಚಟುವಟಿಕೆಗಳಲ್ಲೂ ಸಕ್ರಿಯವಾಗಿ ಪಾಲ್ಗೊಳ್ಳಿ

» **ಚಳ್ಳಕೆರೆ**

ಕಳೆದ ಹಲವಾರು ವರ್ಷಗಳಿಂದ ಸಾಹಿತ್ಯ, ಕ್ರೀಡೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಚಳ್ಳಕೆರೆ ತಾಲ್ಲೂಕು ತನ್ನದೇಯಾದ ವೈಶಿಷ್ಟ್ಯತೆಯನ್ನು ಹೊಂದಿದೆ. ರಾಷ್ಟ್ರೀಯ ಹಾಗೂ ರಾಜ್ಯಮಟ್ಟದಲ್ಲಿ ಹಲವಾರು ಕ್ಷೇತ್ರಗಳಲ್ಲಿ ಖ್ಯಾತಿಯಾದ ಚಳ್ಳಕೆರೆ, ಸಾಂಸ್ಕೃತಿಕ ಚಟುವಟಿಕೆಗಳ ಆಕರ್ಷಣೀಯ ಕೇಂದ್ರವಾಗಿದೆ ಎಂದು ಜಿಲ್ಲಾ ಉಪನ್ಯಾಸಕರ ಸಂಘದ ನಿರ್ಗಮನ ಅಧ್ಯಕ್ಷ ಎಸ್.ಲಕ್ಷ್ಮಣ್ ತಿಳಿಸಿದರು.



ಅವರು, ನಗರದ ಸರ್ಕಾರಿ ಪದವಿಪೂರ್ವ ಕಾಲೇಜು ಆವರಣದಲ್ಲಿ 2023-24ರ ತಾಲ್ಲೂಕು ಪದವಿ ಪೂರ್ವ ಕಾಲೇಜುಗಳ ಸಾಂಸ್ಕೃತಿಕ ಚಟುವಟಿಕೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಪ್ರತಿವರ್ಷ ಪದವಿಪೂರ್ವ ಶಿಕ್ಷಣ ಇಲಾಖೆ ತಾಲ್ಲೂಕು ಮಟ್ಟದ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಜಿಲ್ಲಾ ಹಾಗೂ ರಾಜ್ಯಮಟ್ಟಕ್ಕೆ ಆಯ್ಕೆ ಮಾಡಲಾಗುತ್ತದೆ. ಇದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ, ಮಾನಸಿಕ ಬೆಳವಣಿಗೆಗೆ ಹೆಚ್ಚು ಸಹಕಾರಿಯಾಗಲಿದೆ. ಪಠ್ಯೇತರ ಚಟುವಟಿಕೆಗಳೂ ವಿದ್ಯಾರ್ಥಿಗಳ ಬೆಳವಣಿಗೆಗೆ ಪೂರಕವಾಗಲಿವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜು ಪ್ರಾಂಶುಪಾಲ ಎಂ.ರವೀಶ್ ಮಾತನಾಡಿ, ಪ್ರಸ್ತುತ ತಾಲ್ಲೂಕು ಮಟ್ಟದ ಪದವಿ ಪೂರ್ವ ಕಾಲೇಜುಗಳ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತಾಲ್ಲೂಕಿನ ಸುಮಾರು 25ಕ್ಕೂ ಹೆಚ್ಚು ಕಾಲೇಜಿನ ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರಬಂಧ, ಚರ್ಚೆ, ದೇಶಭಕ್ತಿಗೀತೆ, ಭಾವಗೀತೆ, ಏಕಪಾತ್ರ ಅಭಿನಯ ಮುಂತಾದ ಚಟುವಟಿಕೆಗಳಲ್ಲಿ ಕ್ರಿಯಾಶೀಲವಾಗಿ ಭಾಗವಹಿಸಿದ್ದ ತಮ್ಮಲ್ಲಿರುವ ಸಾಮರ್ಥ್ಯವನ್ನು ಸಾಧರ ಪಡಿಸಿದ್ದಾರೆ. ತಾಲ್ಲೂಕು ಮಟ್ಟದಲ್ಲಿ ಆಯ್ಕೆಯಾದವರನ್ನು ಜಿಲ್ಲಾ ಮಟ್ಟಕ್ಕೆ ಕಳಿಸಲಾಗುವುದು. ಈ ಕಾರ್ಯಕ್ರಮ ಯಶಸ್ವಿಯಾಗಲು ತಾಲ್ಲೂಕಿನ ಎಲ್ಲಾ ಪದವಿ ಪೂರ್ವಕಾಲೇಜಿನ ಪ್ರಾಂಶುಪಾಲರು, ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗ ಸ್ಪಂದಿಸಿದ್ದು, ಪದವಿಪೂರ್ವ ಶಿಕ್ಷಣ ಇಲಾಖೆ ಪರವಾಗಿ ಅಭಿನಂದಿಸುವೆ ಎಂದರು.

ತಾಲ್ಲೂಕು ಮಟ್ಟದಿಂದ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳ ವಿವರ :- ದ್ವಿತೀಯ ಪಿಯುಸಿ ಪ್ರಬಂಧಸ್ಪರ್ಧೆ(ಕನ್ನಡಮಾಧ್ಯಮ) ಬಿ.ಪ್ರಜ್ವಲ್, ಚರ್ಚಾ ಸ್ಪರ್ಧೆ(ಕನ್ನಡಮಾಧ್ಯಮ) ಪಿ.ಆರ್. ಮಂಜುಳಾ ಚರ್ಚಾ ಸ್ಪರ್ಧೆ(ಇಂಗ್ಲಿಷ ಮಾಧ್ಯಮ) ಸುಹಾನ ಕೌಸರ್, ಏಕಪಾತ್ರ ಅಭಿನಯ ಟಿ.ಸಿಂಚನ, ವಿಜ್ಞಾನ ಉಪನ್ಯಾಸ(ಕನ್ನಡಮಾಧ್ಯಮ) ಕೆ.ಎಂ. ರಂಗಸ್ವಾಮಿ, ವಿಜ್ಞಾನ ಉಪನ್ಯಾಸ(ಇಂಗ್ಲಿಷ್ ಮಾಧ್ಯಮ) ಎಂ.ಜೀವನ್ ಸರ್ಕಾರಿ ಪದವಿ ಪೂರ್ವ ಕಾಲೇಜು ಚಳ್ಳಕೆರೆ. ಚಿತ್ರಕಲೆ ಸ್ಪರ್ಧೆ ಜಿ.ಉದಯಕಿರಣ್, ಪ್ರಬಂಧ ಸ್ಪರ್ಧೆ(ಇಂಗ್ಲಿಷ ಮಾಧ್ಯಮ)ಎಂ.ಅನಘ ವಾಸವಿ ಪದವಿಪೂರ್ವ ಕಾಲೇಜು, ಭಾವಗೀತೆ ಮತ್ತು ಜಾನಪದ ಗೀತೆಯಲ್ಲಿ ಯು.ಪಲ್ಲವಿ ಪಿಎಸ್‌ಎಸ್ ಕಾಲೇಜು ಬೆಳಗೆರೆ, ವಾಸವಿ ಪದವಿ ಪೂರ್ವ ಕಾಲೇಜು, ರಸಪ್ರಶ್ನೆಯಲ್ಲಿ ಆರ್.ಸಿದ್ದಲಕ್ಷ್ಮಿ ಮತ್ತು ಬಿ.ಎಂ.ಸಹನ ಬಿ.ಸೀತಾರಾಮಶಾಸ್ತ್ರಿ ಪದವಿ ಪೂರ್ವ ಕಾಲೇಜು ಬೆಳಗೆರೆ.

ಪ್ರಥಮ ಪಿಯುಸಿ ಪ್ರಬಂಧ ಸ್ಪರ್ಧೆ(ಕನ್ನಡಮಾಧ್ಯಮ) ಎಚ್. ದಾದಾಪೀರ್, ಇಂಗ್ಲಿಷ್ ಮಾಧ್ಯಮದಲ್ಲಿ ಕೆ.ಟಿ.ಪ್ರವಲಿಕ, ಚರ್ಚಾ ಸ್ಪರ್ಧೆ (ಕನ್ನಡಮಾಧ್ಯಮ) ಎಸ್.ಚಂದನ, ಭಾವಗೀತೆ ನಾಗರತ್ನ, ವಿಜ್ಞಾನ ಉಪನ್ಯಾಸ ಬಿ.ಟಿ.ಸೌಂದರ್ಯ, ಚಿತ್ರಕಲೆ ಎಚ್. ಆಜಯ್, ರಸಪ್ರಶ್ನೆ ಆರ್.ಚಿತ್ತಾರ, ಪಿ.ದಿವ್ಯ ಸರ್ಕಾರಿ ಪದವಿ ಕಾಲೇಜು ಚಳ್ಳಕೆರೆ, ಜನಪದ ಗೀತೆ ಆರ್.ಸ್ವರೂಪ ಗಿರಿಯಮ್ಮ ಕಾಲೇಜು ಚಳ್ಳಕೆರೆ ಆಯ್ಕೆಯಾದರು.

ಕಾರ್ಯಕ್ರಮದಲ್ಲಿ ಕೆ.ವಿ.ವೆಂಕಟೇಶ್‌ಮೂರ್ತಿ, ಬೆಳಗಟ್ಟ ನಾಗರಾಜು, ಹಬೀಬುಲ್ಲಾ, ಚಂದ್ರಶೇಖರ್, ಪುಷ್ಪಲತಾ, ಬಿ.ಶಾಂತಕುಮಾರಿ, ವಸಂತಕುಮಾರ್ ಮುಂತಾದವರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಸೆ.30ರಂದು ಜನ ಸಂಪರ್ಕ ಸಭೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು ತುರುವನೂರು ಹೋಬಳಿಯ ಬೆಳಗಟ್ಟ, ಕೂನಬೇವು ಹಾಗೂ ಮಾಡನಾಯಕನಹಳ್ಳಿ ಗ್ರಾಮ ಪಂಚಾಯತಿಗಳಲ್ಲಿ ಇದೇ ಸೆಪ್ಟೆಂಬರ್ 30ರಂದು ಜನ ಸಂಪರ್ಕ ಸಭೆ ಆಯೋಜಿಸಲಾಗಿದೆ.ಸೆಪ್ಟೆಂಬರ್ 30ರಂದು ಬೆಳಿಗ್ಗೆ 10ಕ್ಕೆ ಬೆಳಗಟ್ಟ, ಮಧ್ಯಾಹ್ನ 1ಕ್ಕೆ ಕೂನಬೇವು ಹಾಗೂ ಸಂಜೆ 4ಕ್ಕೆ ಮಾಡನಾಯಕನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಜನ ಸಂಪರ್ಕ ಸಭೆ ನಡೆಯಲಿದೆ. ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಜನ ಸಂಪರ್ಕ ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

### ಸೆ.30ರಂದು ನೇರ ನೇಮಕಾತಿ ಸಂದರ್ಶನ

» ಚಿತ್ರದುರ್ಗ

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಇದೇ ಸೆಪ್ಟೆಂಬರ್ 30ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ರವರೆಗೆ ನೇರ ನೇಮಕಾತಿ ಸಂದರ್ಶನ ಹಮ್ಮಿಕೊಳ್ಳಲಾಗಿದೆ.ಸಂದರ್ಶನದಲ್ಲಿ ಬೆಂಗಳೂರಿನ ವಿವಿಧ ಖಾಸಗಿ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಪುರುಷ, ಮಹಿಳೆ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳಲಿವೆ. ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಡಿಪ್ಲೊಮೊ, ಐಟಿಐ, ಹಾಗೂ ಯಾವುದೇ ಪದವಿ ವಿದ್ಯಾರ್ಹತೆವುಳ್ಳವರು ಸಂದರ್ಶನದಲ್ಲಿ ಭಾಗವಹಿಸಬಹುದು. ವಯೋಮಿತಿ 18 ರಿಂದ 30 ವರ್ಷದೊಳಗಿಬೇಕು. ಬಯೋಡಾಟಾ–5 ಪ್ರತಿ, ವಿದ್ಯಾರ್ಹತೆ ಪ್ರಮಾಣ ಪತ್ರಗಳು, ಫೋಟೋಸ್, ಆಧಾರ್ ಕಾರ್ಡ್ ಸೇರಿದಂತೆ ಅಗತ್ಯ ದಾಖಲೆಗಳೊಂದಿಗೆ ಪಾಲ್ಗೊಳ್ಳಬೇಕು.ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 7022459064, 9945587060 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

### ಇಂದು ಸೈಬರ್ ಅಪರಾಧ ಮತ್ತು ಕಾನೂನು ಕುರಿತು ಕಾನೂನು ಸಾಕ್ಷರತಾ ಕಾರ್ಯಕ್ರಮ

» ಚಿತ್ರದುರ್ಗ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ ಹಾಗೂ ಸರ್ಕಾರಿ ವಿಜ್ಞಾನ ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ ಇದೇ ಸೆಪ್ಟೆಂಬರ್ 27ರಂದು ಬೆಳಿಗ್ಗೆ 11 ಗಂಟೆಗೆ ನಗರದ ಸರ್ಕಾರಿ ವಿಜ್ಞಾನ ಕಾಲೇಜಿನಲ್ಲಿ ಸೈಬರ್ ಅಪರಾಧ ಮತ್ತು ಕಾನೂನು ಅರಿವು ಕುರಿತು ಕಾನೂನು ಸಾಕ್ಷರತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಕಾರ್ಯಕ್ರಮ ಉದ್ಘಾಟಿಸುವರು. ಸರ್ಕಾರಿ ವಿಜ್ಞಾನ ಕಾಲೇಜು ಪ್ರಾಚಾರ್ಯ ಪ್ರೊ. ಸಿದ್ರಾಮ ಚನ್ನಗೌಡ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ವಕೀಲರ ಸಂಘದ ಉಪಾಧ್ಯಕ್ಷ ಬಿ.ಎಂ. ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್. ಗಂಗಾಧರ್ ಭಾಗವಹಿಸುವರು. ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಎ. ಮಂಜುನಾಥ ಸೈಬರ್ ಅಪರಾಧ ಮತ್ತು ಕಾನೂನು ಕುರಿತು ಉಪನ್ಯಾಸ ನೀಡುವರು ಎಂದು ಪ್ರಕಟಣೆ ತಿಳಿಸಿದೆ.

### ಸೆ.30ರಂದು ಉದ್ಯಮಶೀಲತಾ ತಿಳುವಳಿಕೆ ತರಬೇತಿ

» ಚಿತ್ರದುರ್ಗ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಇವರ ಪ್ರಾಯೋಜಕತ್ವದಲ್ಲಿ ಸಿಡಾಕ್ (ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ, ಧಾರವಾಡ) ಸಂಸ್ಥೆಯಿಂದ ಸ್ವಯಂ ಉದ್ಯೋಗ ಕೈಗೊಳ್ಳಲು ಇಚ್ಛಿಸುವ ಚಿತ್ರದುರ್ಗ ಜಿಲ್ಲೆಯ ಆಸಕ್ತ ಅಭ್ಯರ್ಥಿಗಳಿಗೆ ಒಂದು ದಿನದ ಉದ್ಯಮಶೀಲತಾ ತಿಳುವಳಿಕೆ ತರಬೇತಿ ಶಿಬಿರವನ್ನು ಇದೇ ಸೆಪ್ಟೆಂಬರ್ 30ರಂದು ಚಿತ್ರದುರ್ಗ ನಗರದ ಅಗಸನಕಲ್ಲು ವಿಕ್ಟರಿ ಮಹಿಳಾ ಕಲ್ಯಾಣ ಸೊಸೈಟಿಯಲ್ಲಿ ಸಂಘಟಿಸಲು ಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸ ಬಯಸುವ ಅಸಕ್ತರಿಗೆ ಪ್ರೇರೇಪಣೆ, ಸ್ವಂತ ಉದ್ಯಮ ಸ್ಥಾಪನೆಗಾಗಿ ಸರ್ಕಾರ ಹಾಗೂ ಹಣಕಾಸು ಸಂಸ್ಥೆಗಳಿಂದ ದೊರೆಯುವ ನೆರವು ಪ್ರೋತ್ಸಾಹ ಮುಂದೆ ಕೈಗೊಳ್ಳಲಾಗುವ ಉದ್ಯಮಶೀಲತಾಭಿವೃದ್ಧಿ ತರಬೇತಿ ಇತ್ಯಾದಿ ವಿಷಯಗಳ ಕುರಿತು ಮಾಹಿತಿ ನೀಡಲಾಗುವುದು. ಆಸಕ್ತರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಯೋಜನ ಪಡೆಯಲು ಕೋರಲಾಗಿದೆ. ಭಾಗವಹಿಸುವವರು ಕನಿಷ್ಠ 18 ವರ್ಷಗಳ ವಯಸ್ಸಿನವರಾಗಿರಬೇಕು ಹಾಗೂ ಓದಲು, ಬರೆಯಲು ಬರಬೇಕು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗದವರಿಗೆ ಆದ್ಯತೆ ನೀಡಲಾಗುವುದು.ಅರ್ಜಿ ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು 2 ಪಾಸ್‌ಪೋರ್ಟ್ ಅಳತೆಯ ಫೋಟೋ ಹಾಗೂ ಆಧಾರ್ ಕಾರ್ಡ್‌ನ ಪ್ರತಿಯೊಂದಿಗೆ ಸಂಪರ್ಕಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಸಿಡಾಕ್ ರವರ ಕಛೇರಿ, ಜಿಲ್ಲಾ ಕೈಗಾರಿಕಾ ಕೇಂದ್ರ ಜೋಗಿಮಟ್ಟಿ ರಸ್ತೆ, ಚಿತ್ರದುರ್ಗರವನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

---

**ಜನರ ಕುಂದುಕೊರತೆ ಆಲಿಸಿ, ಪರಿಹರಿಸಿ, ಸೌಲಭ್ಯ ಕಲ್ಪಿಸಲು ಜನತಾ ದರ್ಶನ ಉಪಯುಕ್ತ; ಜಿಲ್ಲಾ ಸಚಿವರಾದ ಮಲ್ಲಿಕಾರ್ಜುನ್**

# ಕಡಲೆಬಾಳು ಗ್ರಾಮದಲ್ಲಿ ಜನತಾ ದರ್ಶನ

» ದಾವಣಗೆರೆ

ಜನತಾ ದರ್ಶನ ಕಾರ್ಯಕ್ರಮಗಳನ್ನು ಪ್ರತಿ 15 ದಿನಗಳಿಗೊಮ್ಮೆ ಏರ್ಪಡಿಸುವುದರಿಂದ ಜನರ ಕುಂದುಕೊರತೆಗಳನ್ನು ಆಲಿಸಿ, ಸಕಾಲದಲ್ಲಿ ಪರಿಹರಿಸಿ ಸೌಲಭ್ಯ ಕಲ್ಪಿಸಲು ಸಹಕಾರಿಯಾಗಿದ್ದು ಜನರ ಬಳಿಗೆ ಆಡಳಿತ ಕೊಂಡೊಯ್ಯುವ ಪರಿ ಇದಾಗಿದೆ ಎಂದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ತಿಳಿಸಿದರು.

ಕಡಲೆಬಾಳು ಗ್ರಾಮದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಗ್ರಾಮ ಪಂಚಾಯಿತಿ ಇವರ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾದ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಜನರು ಸರ್ಕಾರದ ಸೌಲಭ್ಯಗಳಿಗಾಗಿ ಕಚೇರಿ ಅಲೆಯುವುದನ್ನು ತಪ್ಪಿಸಬೇಕೆಂದು ಮತ್ತು ಸಣ್ಣ, ಸಣ್ಣ ಸಮಸ್ಯೆಗೂ ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದವರೆಗೂ ಅಲೆಯಬೇಕಾದ ಸ್ಥಿತಿಯನ್ನು ತಪ್ಪಿಸುವ ಉದ್ದೇಶದಿಂದ ಸರ್ಕಾರ ಪ್ರತಿ 15 ದಿನಗಳಿಗೊಮ್ಮೆ ಜಿಲ್ಲಾ ಸಚಿವರು ಹಾಗೂ ಜಿಲ್ಲಾಧಿಕಾರಿಗಳು ಜನತಾ ದರ್ಶನ ನಡೆಸಿ ಜನರ ಸಮಸ್ಯೆಗಳನ್ನು ಆಲಿಸಿ ಪರಿಹರಿಸಲು ಮುಖ್ಯ ಮಂತ್ರಿಗಳು ಜನತಾ ದರ್ಶನ ನಡೆಸಿ ಸಮಸ್ಯೆ ಸ್ಥಳದಲ್ಲಿಯೇ ಬಗೆಹರಿಸಲು ಸೂಚನೆ ನೀಡಿದ್ದಾರೆ.

ಜನರ ಸಮಸ್ಯೆಗಳನ್ನು ಆಲಿಸಿ ಸ್ಥಳದಲ್ಲಿಯೇ ಪರಿಹರಿಸುವುದರಿಂದ ಜನರ ಸಮಯ, ಖರ್ಚು ಉಳಿತಾಯವಾಗಿ ವಿಶ್ವಾಸ ಮೂಡುತ್ತದೆ. ಕಡಲೆಬಾಳು ಗ್ರಾಮದಲ್ಲಿ ನಡೆದ ಜನತಾ ದರ್ಶನಕ್ಕೂ ಮುಂಚಿತವಾಗಿ ಪ್ರತಿ ಮನೆಗೂ ಭೇಟಿ ನೀಡಿ ಎಲ್ಲರ ಕುಂದುಕೊರತೆಗಳನ್ನು ಆಲಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದು ಶೌಚಾಲಯ ಇಲ್ಲದ 150 ಅರ್ಜಿ ಹಾಗೂ ಇ–ಸ್ವತ್ತಿನ ಸಮಸ್ಯೆ ಬಗ್ಗೆ 425 ಅರ್ಜಿಗಳನ್ನು ಸ್ವೀಕರಿಸಲಾಗಿದ್ದು ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣ ಮತ್ತು ತಕರಾರು ಇದ್ದ ಪ್ರಕರಣಗಳನ್ನು ಹೊರತುಪಡಿಸಿ ಎಲ್ಲಾ ಅರ್ಜಿಗಳನ್ನು ಇತ್ಯರ್ಥ ಮಾಡಲು ಸೂಚನೆ ನೀಡಲಾಗಿದೆ ಎಂದರು. ಎಲ್ಲ ಮನೆಯಲ್ಲಿಯು ಶೌಚಾಲಯ



ನಿರ್ಮಾಣ ಮಾಡಿಕೊಂಡು ಸ್ವಚ್ಚತೆ ಕಾಪಾಡಿಕೊಳ್ಳಬೇಕಾಗಿದ್ದು ಒಳಚರಂಡಿ ವ್ಯವಸ್ಥೆಯನ್ನು ಮಾಡಿಕೊಡಲಾಗುತ್ತದೆ. ಬೇತೂರು ಗ್ರಾಮದಲ್ಲಿ ಈ ಹಿಂದೆ ಪೈಪ್‌ಲೈನ್ ಮಾಡುವ ಮೂಲಕ ಶೌಚಾಲಯದ ಸಂಪರ್ಕವನ್ನು ಪ್ರತಿ ಮನೆಯಿಂದ ಕಲ್ಪಿಸಲಾಗಿತ್ತು, ಇದೇ ಮಾದರಿಯಲ್ಲಿ ಕಡಲೆಬಾಳು ಸೇರಿದಂತೆ ಎಲ್ಲೆಲ್ಲಿ ಬೇಡಿಕೆ ಹೆಚ್ಚಿದೆ, ಅಂತಹ ಗ್ರಾಮಗಳಲ್ಲಿ ಯುಜಿಡಿ ಪೈಪ್‌ಲೈನ್ ಮಾಡಲು ಯೋಜಿಸಲಾಗಿದ್ದು ಇದು ಗ್ರಾಮಾಂತರ ಪ್ರದೇಶದ ಮಾದರಿ ಯೋಜನೆಯಾಗಲಿದೆ ಎಂದರು.

ಸರ್ವೆ ದೂರುಬಾರದಂತೆ ಕೆಲಸ ನಿರ್ವಹಿಸಲು ಸೂಚನೆ; ಅಮೃತ ನಗರ ಅನೇಕ ವರ್ಷಗಳಿಂದ ಸರ್ವೆಯಾಗದೇ ಸಮಸ್ಯೆಯಾಗಿ ಉಳಿದಿದ್ದು ಹಕ್ಕುಪತ್ರಗಳನ್ನು ಹಂಚಿಕೆ ಮಾಡಲು ಸಾಧ್ಯವಾಗಿಲ್ಲ, ಇಲ್ಲಿ ಒಂದೆರಡು ಸರ್ವೆ ನಂಬರ್ ಸಮಸ್ಯೆ ಇದ್ದು ಕೆಲವೇ ದಿನಗಳಲ್ಲಿ ಇತ್ಯರ್ಥಪಡಿಸಿ ಹಕ್ಕುಪತ್ರ ವಿತರಣೆಗೆ ಕ್ರಮ ವಹಿಸಲಾಗುತ್ತದೆಯಲ್ಲದೆ ಕಂದಾಯ ಗ್ರಾಮವನ್ನಾಗಿಸಲು ಕ್ರಮ ವಹಿಸಲಾಗುತ್ತದೆ. ಅದೇ ರೀತಿ ಮಾಗನಹಳ್ಳಿ ಕಂದಾಯ ಗ್ರಾಮವಾಗಲಿದೆ. ಭೂ ಮಾಪನ ಇಲಾಖೆ ಉಪನಿರ್ದೇಶಕರು ಮೋಜಣಿ ಪೋಡಿ, ಹದ್ದುಬಸ್ತ್, 11ಇ ಸ್ಕೆಚ್, ಇ–ಸ್ವತ್ತು ಇದರಲ್ಲಿ ಯಾವುದೇ ದೂರುಗಳು ಬಾರದಂತೆ ಜನರ ಕೆಲಸವನ್ನು ಅಚ್ಚುಕಟ್ಟಾಗಿ ನಿರ್ವಹಿಸಲು ಸೂಚನೆ ನೀಡಲಾಗಿದೆ ಎಂದರು.

ಉದ್ಯೋಗ ಮೇಳ; ಜನತಾ ದರ್ಶನದ ಮೂಲಕ ಜನರ ಸಮಸ್ಯೆಗಳನ್ನು ಆಲಿಸಿ ಪರಿಹಾರ ಮತ್ತು ಸರ್ಕಾರದ ಸೌಲಭ್ಯಗಳನ್ನು ನೀಡಲಾಗುತ್ತದೆ. ಅದೇ ರೀತಿ ಗ್ರಾಮಾಂತರ ಪ್ರದೇಶದಲ್ಲಿ ಯುವ ಜನರು ಉದ್ಯೋಗದಲ್ಲಿ ತೊಡಗಲು ಉದ್ಯೋಗ ಮೇಳಗಳನ್ನು ಕ್ಯಾಂಪಸ್ ಆಯ್ಕೆ, ಮೇಳಗಳನ್ನು ಆಯೋಜನೆ ಮಾಡುವ ಮೂಲಕ ಜಿಲ್ಲೆಯ ಯುವಕರನ್ನು ಉದ್ಯೋಗಿಗಳನ್ನಾಗಿಸಿ ಅವರಿಗೆ ಬದುಕನ್ನು ಕಟ್ಟಿಕೊಡುವ ಕೆಲಸವನ್ನು ಜಿಲ್ಲಾ ಆಡಳಿತದೊಂದಿಗೆ ಮಾಡಲಾಗುತ್ತದೆ, ಸಾವಿರಾರು ಯುವ ಜನರು ಹೊಸ ಹೊಸ ಉದ್ಯೋಗಕ್ಕೆ ತೆರಳಿದಲ್ಲಿ ಜಿಲ್ಲೆಯ ಜನರ ಆರ್ಥಿಕ ಸ್ಥಿತಿಗತಿ ಸುಧಾರಣೆಯಾಗುತ್ತದೆ ಎಂದರು.

ಯೋಜನೆ ತಲುಪಿಸಿ ಮಾದರಿಯಾಗಿ; ರೈತರು ಕೃಷಿಯೊಂದಿಗೆ ಹೈನುಗಾರಿಕೆ ಕೈಗೊಳ್ಳುವುದರಿಂದ ಸುಸ್ಥಿರ ಅಭಿವೃದ್ಧಿಯಾಗಲಿದೆ.ಕೃಷಿ ಇಲಾಖೆಯಿಂದ ರೈತರಿಗೆ ಪಶು ಸಾಕಾಣಿಕೆಗಾಗಿ ರೂ.40 ಸಾವಿರ ಸಹಾಯಧನ ನೀಡಲಾಗುತ್ತದೆ. ಈಗಾಗಲೇ ತಮಿಳುನಾಡಿನಿಂದ ಹಸುಗಳನ್ನು ಖರೀದಿಸಿ ನೀಡಲಾಗುತ್ತಿದೆ. ಇದರೊಂದಿಗೆ ಡಿಸಿಸಿ ಬ್ಯಾಂಕ್‌ನಿಂದ ಸಾಲದ ರೂಪದಲ್ಲಿ ಇನ್ನಷ್ಟು ಹಣ ನೀಡಿದಲ್ಲಿ ಗುಜರಾತ್‌ನಿಂದ ಇನ್ನೂ ಅತ್ಯುತ್ತಮ ತಳಿಗಳ ಎಮ್ಮೆ, ಹಸುಗಳನ್ನು ಖರೀದಿಸುವುದರಿಂದ ಹಾಲು ಹೆಚ್ಚು ಮತ್ತು ದೀರ್ಘಾವಧಿಯವರೆಗೆ ಕೊಡುತ್ತವೆ. ಜಿಲ್ಲಾ ಸಹಕಾರ ಬ್ಯಾಂಕ್‌ನವರು ಈ ನಿಟ್ಟಿನಲ್ಲಿ ರೈತರಿಗೆ ಸಹಾಯ ಮಾಡಬೇಕೆಂದರು.

5 ಕೆರೆಗಳಿಗೆ ನೀರು; ಕಡಲೆಬಾಳು ಗ್ರಾಮವು ಅಚ್ಚುಕಟ್ಟು ಪ್ರದೇಶದ ಕೊನೆಯ ಭಾಗವಾಗಿದ್ದರಿಂದ ಇಲ್ಲಿ ನೀರಿನ ಸಮಸ್ಯೆ ಹೆಚ್ಚು ಇದೆ. ಇದಕ್ಕಾಗಿಯೇ ಈ ಹಿಂದೆ 5 ಕೆರೆಗಳಿಗೆ ನೀರು ತುಂಬಿಸಲು 135 ಕೋಟಿ ವೆಚ್ಚದ ಯೋಜನೆ ರೂಪಿಸಲಾಗಿತ್ತು, ಆದರೆ ಕಾರಣಾಂತರದಿಂದ ನಿಂತು ಹೋಗಿದೆ. ಇದನ್ನು ಅನುಷ್ಠಾನ ಮಾಡಿ ಈ ಭಾಗದ ರೈತರ ಸಮಸ್ಯೆ ನೀಗಲು ಕ್ರಮ ವಹಿಸಲಾಗುತ್ತದೆ ಎಂದರು.ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಮಾತನಾಡಿ ಸ್ಥಳೀಯವಾಗಿ ಪರಿಹಾರ ಕಂಡುಕೊಳ್ಳಲು ಮತ್ತು ಜನರ ಮನೆಬಾಗಿಲಿಗೆ ಆಡಳಿತ ಕೊಂಡೊಯ್ದು ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ಜನತಾ ದರ್ಶನ ಕಾರ್ಯಕ್ರಮ ಆಯೋಜಿಸಲಾಗಿದ್ದು ಇದರಲ್ಲಿ 850 ಕ್ಕಿಂತಲೂ ಹೆಚ್ಚಿನ ಅರ್ಜಿಗಳು ಸ್ವೀಕೃತವಾಗಿವೆ. ಈ ಎಲ್ಲಾ ಅರ್ಜಿಗಳನ್ನು ಐಪಿಜಿಆರ್‌ಎಸ್ ಸಿಸ್ಟಂನಲ್ಲಿ ದಾಖಲಿಸಿ ಜನರಿಗೆ ಅವರ ಅರ್ಜಿ ಸ್ಥಿತಿಗತಿ ಮಾಹಿತಿ ತಿಳಿದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದರು.

ಜನತಾ ದರ್ಶನ ಅಂಗವಾಗಿ 25 ಕ್ಕೂ ಹೆಚ್ಚು ಭೂ ಮಾಪಕರು ಸುತ್ತಮುತ್ತಲಿನ ಗ್ರಾಮಗಳಲ್ಲಿ ಸರ್ವೆ ಕಾರ್ಯ ಕೈಗೊಂಡು ಪಹಣಿ ತಿದ್ದುಪಡಿ, ಸರ್ವೆ ದಾಖಲೆ ತಿದ್ದುಪಡಿ ಕಾರ್ಯವನ್ನು ಏಕಕಾಲದಲ್ಲಿ ಮಾಡಲಾಗಿದೆ. ಇಂದು ನೊಂದವರಿಗೆ ಜನತಾ ದರ್ಶನ ಆಶಾಕಿರಣವಾಗಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್ ಮಾತನಾಡಿ ಕಡಲೆಬಾಳು ಗ್ರಾಮದಲ್ಲಿ ಇ–ಸ್ವತ್ತಿನ 400 ಅರ್ಜಿಗಳು ಸ್ವೀಕೃತವಾಗಿದ್ದು ಜಿಲ್ಲೆಯಲ್ಲಿನ ಇ–ಸ್ವತ್ತಿನ ಸಮಸ್ಯೆಯನ್ನು ಬಗೆಹರಿಸಲು ಕ್ರಿಯಾ ಯೋಜನೆ ರೂಪಿಸಿ ಇತ್ಯರ್ಥಕ್ಕೆ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.ಸಲ್ಲಿಕೆಯಾದ ಅರ್ಜಿಗಳಲ್ಲಿ ಸರ್ವೆ ಇಲಾಖೆ, ಕಂದಾಯ ಇಲಾಖೆ, ಪಂಚಾಯತ್ ರಾಜ್ ಮತ್ತು ಗ್ರಾಮೀಣಾಭಿವೃದ್ಧಿ, ವಸತಿ ಯೋಜನೆಗೆ ಸಂಬಂಧಿಸಿದ ಅರ್ಜಿಗಳ ಸಂಖ್ಯೆ ಹೆಚ್ಚಿತ್ತು. ವಸ್ತುಪ್ರದರ್ಶನ ಮತ್ತು ಆರೋಗ್ಯ ಮೇಳ; ಜನತಾ ದರ್ಶನದ ಅಂಗವಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಪೋಷಣ್ ಅಭಿಯಾನ, ಎನ್.ಆರ್.ಎಲ್.ಎಂ. ಸ್ವಸಹಾಯ ಗುಂಪುಗಳು ಉತ್ಪಾದಿಸಿದ ವಸ್ತುಗಳ ಪ್ರದರ್ಶನ, ಆರೋಗ್ಯ ಇಲಾಖೆಯಿಂದ ಆರೋಗ್ಯ ಶಿಬಿರ, ತೋಟಗಾರಿಕೆ, ಕೃಷಿ, ಬೆಸ್ಕಾಂ ಸೇರಿದಂತೆ ವಿವಿಧ ಇಲಾಖೆಗಳ ಮಳಿಗೆ ನಿರ್ಮಾಣ ಮಾಡಿ ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಅಕ್ಕಮ್ಮ, ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಪ್ರಭಾಕರ್, ಸಹಕಾರ ಸೊಸೈಟಿಯ ಸತ್ಯಬಾಬು, ಮುಖಂಡರಾದ ರಾಘವೇಂದ್ರ, ಗಿರೀಶ್, ಬೇತೂರು ಕರಿಬಸಪ್ಪ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು, ಮುಖಂಡರು ಉಪಸ್ಥಿತರಿದ್ದರು.

---

## ಹಿಂದೂ ಸಮಾಜವನ್ನು ಸರ್ವಶಕ್ತವಾಗಿ ಬೆಳೆಸುವಲ್ಲಿ ಪಂಡಿತ್ ದೀನ್ ದಯಾಳ್ ಉಪಾಧ್ಯಾಯರ ಪಾತ್ರ ಹಿರಿದು: ರಾಮರೆಡ್ಡಿ

» ಚಳ್ಳಕೆರೆ

ರಾಷ್ಟ್ರೀಯ ವಿಚಾರಧಾರೆಯನ್ನು ಪ್ರತಿಯೊಬ್ಬ ವ್ಯಕ್ತಿಯೂ ಅರಿತುಕೊಳ್ಳುವಂತೆ ಮಾಡುವಲ್ಲಿ ಪಂಡಿತ್ ದೀನ್ ದಯಾಳ್ ಉಪಾಧ್ಯಾಯರು ಹೆಚ್ಚು ಶ್ರಮಿಸಿದರು. ಸಮಾಜದಲ್ಲಿ ಸಮಾನತೆಯನ್ನು ಪ್ರತಿಪಾದನೆ ಮಾಡುತ್ತಾ ಬಂದ ದೇಶದ ಅಗ್ರನಾಯಕರಲ್ಲಿ ಅವರೂ ಸಹ ಒಬ್ಬರು ಎಂದು ನಾಯಕನಹಟ್ಟಿ–ತಳಕು ಬಿಜೆಪಿ ಮಂಡಲಾಧ್ಯಕ್ಷ ಈ.ರಾಮರೆಡ್ಡಿ ತಿಳಿಸಿದರು.

ಅವರು, ಪಕ್ಷದ ಕಾರ್ಯಾಲಯದಲ್ಲಿ ಪಂಡಿತ್ ದೀನ್ ದಯಾಳ್ ಉಪಾಧ್ಯಾಯರ 107ನೇ ಜನ್ಮದಿನೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ದೇಶದಲ್ಲಿ ಸಮಾನ ನಾಗರೀಕತೆಯನ್ನು ಎಲ್ಲೆಡೆ ಕಾಣುವ ತವಕವನ್ನು ಅವರು ಹೊಂದಿದ್ದರು. ಮೊಟ್ಟಮೊದಲ ಬಾರಿಗೆ ಜನಸಂಘ ಎಂಬ ಹಿಂದೂ ಸಂಘಟನೆಯನ್ನು ಹುಟ್ಟುಹಾಕಿದ ಮಹಾನೀಯರು ಅವರು ಎಂದರು.

ಜಿಲ್ಲಾ ಎಸ್ಟಿ ಮೋರ್ಚಾ ಅಧ್ಯಕ್ಷ ಶಿವಣ್ಣ ಮಾತನಾಡಿ, ಹಿಂದಿನ ಜನಸಂಘ ಇಂದು ಬಿಜೆಪಿಯಾಗಿ ಪರಿವರ್ತನೆಯಾಗಿದೆ. ರಾಜಕೀಯ ಕ್ಷೇತ್ರದಲ್ಲಿ ಶಕ್ತಿಯಾಗಿ ಬೆಳೆದಿದೆ. ಹಿಂದೂ



ಸಮಾಜವನ್ನು ರಕ್ಷಣೆ ಮಾಡುವ ಉದ್ದೇಶವನ್ನು ಹೊಂದಿದ ಮಹಾನ್ ಚೇತನ ಪಂಡಿತ್ ದೀನ್ ದಯಾಳ್ ಉಪಾಧ್ಯಾಯರು ಎಂದರು.

ಮಂಡಲಪ್ರಧಾನಕಾರ್ಯದರ್ಶಿ ಚನ್ನಗಾನಹಳ್ಳಿ ಮಲ್ಲೇಶ್, ಗೋವಿಂದಪ್ಪ, ಕಾರ್ಯದರ್ಶಿ ಎಚ್.ವಿ.ಪ್ರಕಾಶ್‌ರೆಡ್ಡಿ, ಎಸ್ಸಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಬಿ.ಎಚ್.ಪ್ರಕಾಶ್, ರೈತಮೋರ್ಚಾ ಪ್ರಧಾನ ಕಾರ್ಯದರ್ಶಿ ಬಿ.ಬೋರಯ್ಯ, ಪಲ್ಲಕ್ಕಿರೆಡ್ಡಿ, ಸಣ್ಣಮಲ್ಲಯ್ಯ ಮುಂತಾದವರು ಉಪಸ್ಥಿತರಿದ್ದರು.

---

## ಸಂತ ಜೋಸೆಫ್ ಕಾನ್ವೆಂಟ್ ಶಾಲೆಯಲ್ಲಿ ತಾಲ್ಲೂಕು ಮಟ್ಟದ ಪ್ರತಿಭಾ ಕಾರಂಜಿ



**ಚಿತ್ರದುರ್ಗ:** ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಿ ಹೊರತರುವಲ್ಲಿ ಪ್ರತಿಭಾ ಕಾರಂಜಿ ಸಹಕಾರಿಯಾಗಲಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಹೇಳಿದರು. ಶಿಕ್ಷಣ ಇಲಾಖೆ ವತಿಯಿಂದ ಸಂತ ಜೋಸೆಫ್ ಕಾನ್ವೆಂಟ್ ಶಾಲೆಯಲ್ಲಿ ಏರ್ಪಡಿಸಲಾಗಿದ್ದ ತಾಲ್ಲೂಕು ಮಟ್ಟದ ಪ್ರತಿಭಾ ಕಾರಂಜಿ ಉದ್ಘಾಟಿಸಿ ಮಾತನಾಡಿದರು. ಮಕ್ಕಳಲ್ಲಿರುವ ಸೃಜನಶೀಲತೆ, ಕಲೆ, ಸಾಹಿತ್ಯ, ಸಂಸ್ಕೃತಿಯನ್ನು ಗುರುತಿಸಿ ಹೊರತೆಗೆಯುವ ಕೆಲಸ ಶಿಕ್ಷಕರುಗಳಿಂದ ಮಾತ್ರ ಸಾಧ್ಯ. ಪ್ರತಿಭಾ ಕಾರಂಜಿಯ ಮೂಲಕ ಮಕ್ಕಳು ತಮ್ಮ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಪರಿಣಾಮಕಾರಿಯಾಗಲಿದೆ. ಕ್ಲಸ್ಟರ್ ಹಂತದಿಂದ ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ಭಾಗವಹಿಸುವ ಅವಕಾಶಗಳು ಮಕ್ಕಳಿಗೆ ಸಿಗುತ್ತದೆ. 2002 ರಲ್ಲಿ ಆರಂಭಗೊಂಡ ಪ್ರತಿಭಾ ಕಾರಂಜಿ ಪ್ರತಿವರ್ಷವೂ ನಿರಂತರವಾಗಿ ನಡೆಯುತ್ತಿದೆ ಎಂದರು. ತೀರ್ಪುಗಾರರು ಮಕ್ಕಳಲ್ಲಿನ ಕೌಶಲ್ಯವನ್ನು ಗುರುತಿಸಿ ಯಾವುದೇ ಲೋಪವಿಲ್ಲದೆ ಪ್ರಾಮಾಣಿಕವಾಗಿ ತೀರ್ಪು ನೀಡಬೇಕು ಎಂದು ಸೂಚಿಸಿದರು.ತಾಲ್ಲೂಕಿನ ಎಂಟು ನೂರಕ್ಕೂ ಹೆಚ್ಚು ಮಕ್ಕಳು ಪ್ರತಿಭಾ ಕಾರಂಜಿಯಲ್ಲಿ ಭಾಗವಹಿಸಿ ತಮ್ಮಲ್ಲಿರುವ ಪ್ರತಿಭೆಯನ್ನು ಹೊರಸೂಸಿದರು.162 ತೀರ್ಪುಗಾರರು ಭಾಗವಹಿಸಿದ್ದರು.

---

**ಪ್ರಮುಖ ಸುದ್ದಿ**

# ಏಕಾತ್ಮಕ ಮಾನವತವಾದದ ಪ್ರತಿಪಾದಕ ದೀನದಯಾಳ್

» ಹೊಸದುರ್ಗ

ಭಾರತ ದೇಶ ಕಂಡಂತಹ ಶ್ರೇಷ್ಠ ರಾಜನೀತಿ ತಜ್ಞ ಹಾಗೂ ಏಕಾತ್ಮಕ ಮಾನವತವಾದದ ಪ್ರತಿಪಾದಕ ಪಂಡಿತ್ ದೀನ್ ದಯಾಳ್ ಉಪಾಧ್ಯಾಯ. ಇಂತಹ ಮಹಾತ್ಮ ಜನ್ಮದಿನಾಚರಣೆಯನ್ನು ನಾವೆಲ್ಲರೂ ಕೂಡ ಅರ್ಥಪೂರ್ಣವಾಗಿ ಅವರ ವಿಚಾರ, ಚಿಂತನೆಗಳನ್ನು ಅರ್ಥ ಮಾಡಿಕೊಳ್ಳುವ ಮೂಲಕ ಆಚರಿಸೋಣ ಎಂದು ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಬಡೆಕಟ್ಟೆ ರಾಜೇಶ್ ಹೇಳಿದರು.

ಪಟ್ಟಣದ ಬಿಜೆಪಿ ಕಾರ್ಯಾಲಯದಲ್ಲಿ ಸೋಮವಾರ ತಾಲೂಕು ಬಿಜೆಪಿ ಮಂಡಲದ ವತಿಯಿಂದ ಆಯೋಜಿಸಿದ್ದ ಪಂಡಿತ್ ದೀನ್ ದಯಾಳ್ ಉಪಾಧ್ಯಾಯ ಅವರ ಜನ್ಮದಿನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ದೀನ್ ದಯಾಳ್ ಕೇವಲ ಅವರೊಬ್ಬ ರಾಜಕಾರಣಿ ಆಗದೆ, ಸಾಹಿತಿ, ಪತ್ರಕರ್ತ ಚಿಂತಕ ಮತ್ತು ವಿದ್ವಾಂಸರಾಗಿದ್ದರು. ಭಾರತದಲ್ಲಿ ಬದುಕುವ ಎಲ್ಲರೂ ಸಮಾನತೆಯಿಂದ ಬದುಕುವಂತಾಗಬೇಕೆಂಬ ಏಕಾತ್ಮಕ ಮಾನವತವಾದದ ಪ್ರತಿಪಾದಕರಾಗಿದ್ದರು.




ಅಂದು ಅವರಲ್ಲಿದ್ದ ಚಿಂತನೆಗಳು, ಇಂದು ಸಾರ್ವಕಾಲಕ್ಕೂ ಸತ್ಯವಾಗಿವೆ. ಬಿಜೆಪಿಯ ಈಗಿನ ನಾಯಕರು ಮತ್ತು ಕಾರ್ಯಕರ್ತರಾದ ನಾವುಗಳು ದೇಶಕ್ಕಾಗಿ ಅವರ ಪಟ್ಟ ಶ್ರಮ, ಪಕ್ಷದ ಸಂಘಟನೆಗಾಗಿ ಅವರ ಹೋರಾಟದಿಂದ ನಾವು ಕಲಿಯಬೇಕಾಗಿರುವುದು ಬಹಳಷ್ಟುಯಿದೆ. ಅಟಲ್ ಜಿ ರವರು ಪಂಡಿತ್ ರವರನ್ನು ಮುಳುಗದ ಸೂರ್ಯ ಎಂದು ಸಂಬೋಧಿಸುತ್ತಿದ್ದರು ಎಂದು ಹೇಳಿದರು.

ಬಿಜೆಪಿ ಮುಖಂಡ, ಉದ್ಯಮಿ ಡಿ.ಎಸ್.ಪ್ರದೀಪ್ ಮಾತನಾಡಿ, ಕ್ರಿಯಾಶೀಲ ವ್ಯಕ್ತಿತ್ವದ ಅಧ್ಯಯನ, ಚಿಂತನೆ, ಬರವಣಿಗೆ ಪ್ರವಾಸ ಎಲ್ಲದರಲ್ಲಿಯೂ ಪ್ರಬುದ್ಧತೆ ಮೆರೆದ ಪಂಡಿತ್ ದೀನದಯಾಳ ಉಪಾಧ್ಯಯರಂತಹ ವಿರಳ ರಾಜನೀತಿ ವಿದ್ವಾಂಸ, ಸಾಹಿತಿ ಈ ಜಗತ್ತಿನ ಇತಿಹಾಸದಲ್ಲಿ ಮತ್ತೊಬ್ಬರನ್ನು ಕಾಣಲು ಸಾಧ್ಯವಿಲ್ಲ. ಜಾಗತೀಕರಣ ಉದಾರಿಕರಣಕ್ಕೆ ಸಿಲುಕದೆ, ಇಂದು ಭಾರತ ವಿಶ್ವದ ಪ್ರಭಾವಿ ದೇಶವಾಗಿ ಹೊರಹೊಮ್ಮಲು ಏಕಾತ್ಮಕವಾದ ಒಂದು ಕಾರಣವಾಗಿದೆ ಎನ್ನಬಹುದು. ಸಾಮಾಜಿಕ ಆಧ್ಯಾತ್ಮಿಕ ಆರ್ಥಿಕ ಹಾಗೂ ಕೌಟುಂಬಿಕ ವ್ಯವಸ್ಥೆಯಲ್ಲಿ ಸಾಮರಸ್ಯ ಸಮನ್ವಯ ಭಾವವಿರಬೇಕು ಎಂದು ಪಂಡಿತ್ ಜಿ ರವರು ಬಲವಾಗಿ ನಂಬಿದ್ದರು. ಇವರ ಆಶಯಗಳನ್ನು ಈಡೇರಿಸುವಲ್ಲಿ ಪ್ರಧಾನಿ ಮೋದಿ ಅವರು ಕಾರ್ಯೋನ್ಮುಖರಾಗಿರುವುದು ಸಂತಸ ತಂದಿದೆ ಎಂದರು. ಮಂಡಲ ಅಧ್ಯಕ್ಷ ಗೂಳಿಹಟ್ಟಿ ಜಗದೀಶ್ ಮಾತನಾಡಿ, ಬಿಜೆಪಿ ಕಾರ್ಯಕರ್ತರಲ್ಲಿ ಶಿಸ್ತು, ಶ್ರದ್ಧೆ, ಸಂಯಮ ಮತ್ತು ರಾಷ್ಟ್ರೀಯತೆ ಬೆಳೆಯಲು ಭದ್ರಾ ಬುನಾದಿ ಹಾಕಿದ ಅಗ್ರಪಂಥಿಯ ನಾಯಕರಲ್ಲಿ ಪಂಡಿತ್ ಜಿ ರವರ ಕೊಡುಗೆ ಅಪಾರ. ಉತ್ತರ ಪ್ರದೇಶದ ಮಥುರ ಜಿಲ್ಲೆಯಲ್ಲಿ ಜನಿಸಿದ ಪಂಡಿತ್ ರವರು 52 ವರ್ಷಗಳ ಕಾಲ ತನ್ನ ಬದುಕಿನುದ್ದಕ್ಕೂ ದೇಶ ಕಾರ್ಯದಲ್ಲಿ ತನ್ನನ್ನು ತೊಡಗಿಸಿಕೊಂಡು ಸ್ವತಂತ್ರ ಭಾರತ ಸರ್ಕಾರದಲ್ಲಿ ಸಚಿವರಾಗಿ, ಭಾರತೀಯ ಜನಸಂಘದ ಅಧ್ಯಕ್ಷರಾಗಿ ಕಾಶ್ಮೀರ ಭಾರತದ ಅವಿಭಾಜ್ಯ ಅಂಗ ಎಂಬ ಘೋಷ ವಾಕ್ಯವನ್ನು ಮೈಗೂಡಿಸಿಕೊಂಡು ಬದುಕಿದ ಮಹಾನ್ ನಾಯಕನಿಗೆ, ವಿಕೃತ ಮನಸ್ಸಿನ ವಿರೋಧಿಗಳು ಮೊಘಲ್ ಸರಾಯಿ ರೈಲ್ವೆ ನಿಲ್ದಾಣದಲ್ಲಿ ಹತ್ಯೆಗೈದಿದ್ದು ದುರದೃಷ್ಟಕರ ಸಂಗತಿ. ಆದರೆ, ಅವರು ಹಾಕಿಕೊಟ್ಟ ದಾರಿಯಲ್ಲಿ ಬಿಜೆಪಿ ನೇತೃತ್ವದ ನರೇಂದ್ರ ಮೋದಿ ಸರ್ಕಾರ ಪ್ರಪಂಚವನ್ನೇ "ವಸುದೈವ ಕುಟುಂಬಕಂ" ಎಂಬ ರೀತಿಯಲ್ಲಿ ಶಾಂತಿ ಸ್ಥಾಪಿಸುವ ನಿಟ್ಟಿನಲ್ಲಿ ಪಂಡಿತ್ ಜಿ ರವರ ಆದರ್ಶ ಬದುಕು ನಮಗೆ ಪ್ರೇರಣೆಯಾಗಬೇಕಿದೆ ಎಂದರು.

ಈ ವೇಳೆ ಕಾರ್ಯಕ್ರಮದಲ್ಲಿ ಪುರಸಭಾ ಸದಸ್ಯ ದಾಳಿಂಬೆ ಗಿರೀಶ್, ರೈತ ಮೋರ್ಚಾ ಅಧ್ಯಕ್ಷ ಡಿ.ಟಿ.ಲಿಂಗರಾಜು, ಹುರುಳಿಹಳ್ಳಿ ಕುಮಾರ್, ಗೂಳಿಹಟ್ಟಿ ಮಲ್ಲಿಕಾರ್ಜುನ್, ಸುನಿಲ್, ಮನು ಮತ್ತು ನವೀನ್ ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಇಂದು ಆರೋಗ್ಯ ಶಿಬಿರ

**ಚಿತ್ರದುರ್ಗ:** ಚಿತ್ರದುರ್ಗ ನಗರದ ಐತಿಹಾಸಿಕ ಕೋಟೆಯ ಆವರಣದಲ್ಲಿ ಇದೇ ಸೆಪ್ಟೆಂಬರ್ 27ರಂದು ಬೆಳಿಗ್ಗೆ 10.30ಕ್ಕೆ ಆಯುಷ್ಮಾನ್ ಭವ ಕಾರ್ಯಕ್ರಮದಡಿ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಶಿಬಿರದಲ್ಲಿ ಜಿಲ್ಲಾ ಆರೋಗ್ಯಾಧಿಕಾರಿಗಳು, ಜಿಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳು, ಜಿಲ್ಲಾ ಸರ್ವೇಕ್ಷಣಾ ಅಧಿಕಾರಿಗಳು, ಜಿಲ್ಲಾ ಕುಷ್ಠರೋಗ ನಿವಾರಣಾಧಿಕಾರಿಗಳು ಭಾಗವಹಿಸಲಿದ್ದಾರೆ.

### ಸೆ.30ರಂದು ಕೆಡಿಪಿ ಸಭೆ

**ಚಿತ್ರದುರ್ಗ:** ಚಿತ್ರದುರ್ಗ ಜಿಲ್ಲಾ ಪಂಚಾಯಿತಿ ಆಗಸ್ಟ್-2023ರ ಮಾಹೆಯ ಅಂತ್ಯದವರೆಗಿನ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಮಾಸಿಕ ಕೆ.ಡಿ.ಪಿ ಸಭೆಯನ್ನು ಇದೇ ಸೆಪ್ಟೆಂಬರ್ 30ರಂದು ಮಧ್ಯಾಹ್ನ 3ಕ್ಕೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.ಂಗಳೂರು ವಿಭಾಗ ಪ್ರಾದೇಶಿಕ ಆಯುಕ್ತರು ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮತ್ತು ಜಿಲ್ಲಾ ಪಂಚಾಯಿತಿ ಆಡಳಿತಾಧಿಕಾರಿ ಅಮ್ಲಾನ್ ಆದಿತ್ಯ ಬಿಸ್ವಾಸ್ ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಸತೀಶ್ ರೆಡ್ಡಿ ತಿಳಿಸಿದ್ದಾರೆ.

### ಜಂಟಿಖಾತೆಯಲ್ಲಿದ್ದ ನಿವೇಶನ ಅಕ್ರಮವಾಗಿ ಇ-ಸ್ವತ್ತು ಮಾಡಿದ ಪಿಡಿಒ ಅಮಾನತು

**ಚಿತ್ರದುರ್ಗ:** ಜಂಟಿ ಖಾತೆಯಲ್ಲಿದ್ದ ನಿವೇಶನಗಳನ್ನು ಅಕ್ರಮವಾಗಿ ಇತರೆ ವ್ಯಕ್ತಿಯೊಬ್ಬರಿಗೆ ಖಾತೆ ಮಾಡಿಕೊಟ್ಟು, ಇ-ಸ್ವತ್ತು ಖಾತೆ ಮಾಡಿದ ಹಿರಿಯೂರು ತಾಲ್ಲೂಕು ಯರಬಳ್ಳಿ ಗ್ರಾಮ ಪಂಚಾಯತ್ ಪಿಡಿಒ ಬಸವರಾಜು ಎಸ್. ಅವರನ್ನು ಅಮಾನತುಗೊಳಿಸಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ಅವರು ಆದೇಶ ಹೊರಡಿಸಿದ್ದಾರೆ. ತಿಪ್ಪಮ್ಮ ಇವರ ಹೆಸರಿನಲ್ಲಿನ ಸೈಟ್ ನಂ. 31 ಹಾಗೂ 32 ಸ್ವತ್ತನ್ನು ವೈನ್ ಶಾಪ್ ಅಂಗಡಿ ವ್ಯವಹಾರ ನಡೆಸುವುದಕ್ಕಾಗಿ ಯರಬಳ್ಳಿ ಗ್ರಾಮ ಪಂಚಾಯತ್‌ನ ಕಂದಿಕೆರೆ ಗ್ರಾಮದ ಕೆ.ವಿ. ಉಮಾದೇವಿ ಹಾಗೂ ಆರ್. ಹೊರಕೇರಪ್ಪ ಅವರು ಹಿರಿಯೂರಿನ ಉಪನೊಂದಣಿ ಕಚೇರಿಯಲ್ಲಿ ಕಳೆದ 2017 ರ ಫೆಬ್ರವರಿ 13 ರಂದು ಜಂಟಿ ಖಾತೆಯಾಗಿ ನೊಂದಣಿ ಮಾಡಿಸಿಕೊಂಡಿದ್ದರು. ಆದರೆ ಇದನ್ನು ಅಕ್ರಮವಾಗಿ ನಕಲಿ ಮತ್ತು ಪೋರ್ಜರಿ ದಾಖಲೆಗಳನ್ನು ಸೃಷ್ಟಿಸಿಕೊಂಡು, ಆರ್. ಹೊರಕೇರಪ್ಪ ಇವರ ಖಾತೆಗೆ ಮಾಡಿ, ಅಕ್ರಮವಾಗಿ ಮತ್ತು ಕಾನೂನು ಬಾಹಿರವಾಗಿ ಇ-ಸ್ವತ್ತು ಮಾಡಿಕೊಟ್ಟು ಅಧಿಕಾರದ ದುರುಪಯೋಗ ಮಾಡಿರುತ್ತಾರೆ ಎಂಬುದಾಗಿ ದೂರು ಬಂದ ಹಿನ್ನೆಲೆಯಲ್ಲಿ ಹಿರಿಯೂರು ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿಗಳು ಪರಿಶೀಲಿಸಿ ಕ್ರಮ ಕೈಗೊಂಡಿದ್ದರು, ಈ ಬಗ್ಗೆ ಸ್ಥಳ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಯವರಿಗೆ ಆದೇಶಿಸಲಾಗಿತ್ತು. ಅದರನ್ವಯ ಜಿ.ಪಂ. ಉಪಕಾರ್ಯದರ್ಶಿ ಅವರು ಸಲ್ಲಿಸಿರುವ ವರದಿ ಆಧಾರದಲ್ಲಿ, ಯರಬಳ್ಳಿ ಗ್ರಾಮ ಪಂಚಾಯತ್ ಪಿಡಿಒ ಬಸವರಾಜು ಎಸ್. ಅವರು ಜವಾಬ್ದಾರಿಯುತ ಸರ್ಕಾರಿ ಅಧಿಕಾರಿಯಾಗಿ, ಅಕ್ರಮವಾಗಿ, ಕಾನೂನು ಬಾಹಿರವಾಗಿ ಇ-ಸ್ವತ್ತುಗಳನ್ನು ಮಾಡಿ, ಕರ್ತವ್ಯ ಲೋಪ ಎಸಗಿದ ಹಿನ್ನೆಲೆಯಲ್ಲಿ ಇಲಾಖಾ ವಿಚಾರಣೆ ಕಾಯ್ದಿರಿಸಿ, ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತುಗೊಳಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ಅವರು ಆದೇಶದಲ್ಲಿ ತಿಳಿಸಿದ್ದಾರೆ.

### ಉಚಿತ ಲ್ಯಾಪ್‌ಟಾಪ್ ಪಡೆಯಲು ಅರ್ಜಿ ಆಹ್ವಾನ

» **ದಾವಣಗೆರೆ**

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ನೊಂದಾಯಿತ ಕಾರ್ಮಿಕರ ಮಕ್ಕಳು ಪ್ರಸಕ್ತ ಸಾಲಿನಲ್ಲಿ ಪ್ರಥಮ ಹಾಗೂ ದ್ವಿತೀಯ ಪಿಯುಸಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್‌ಗಳನ್ನು ವಿತರಿಸಲು ಅರ್ಜಿ ಆಹ್ವಾನಿಸಲಾಗಿದೆ. ದಾವಣಗೆರೆ ಉಪ ವಿಭಾಗದ ಕಾರ್ಮಿಕ ಅಧಿಕಾರಿ ಇವರ ವ್ಯಾಪ್ತಿಯಲ್ಲಿ ನೋಂದಣಿಯಾಗಿರುವ ಕಾರ್ಮಿಕರು ಈ ಸೌಲಭ್ಯವನ್ನು ಪಡೆಯಬಹುದು.

### ಗುತ್ತಿಗೆ ಆಧಾರದ ಮೇಲೆ ಸಹಾಯಕ ಹುದ್ದೆಗೆ ಅರ್ಜಿ

**ದಾವಣಗೆರೆ:** ದಾವಣಗೆರೆ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ನೇರಗುತ್ತಿಗೆ ಆಧಾರದ ಮೇಲೆ ಒಂದು ವರ್ಷದ ಅವಧಿಗೆ ಸಿಬ್ಬಂದಿಯನ್ನು ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ. ಆನಗೋಡು ಸಮೀಪ ಹುಳುಪಿನಕಟ್ಟೆ ವ್ಯಾಪ್ತಿಯಲ್ಲಿ ಸ್ಥಾಪಿಸಲಾಗಿರುವ ಈ ವಿಜ್ಞಾನ ಕೇಂದ್ರದಲ್ಲಿ ಶಿಕ್ಷಣ ಸಹಾಯಕರ ಎರಡು ಹುದ್ದೆಗೆ ಅರ್ಹತಾ ಪರೀಕ್ಷೆ ಹಾಗೂ ಸಂದರ್ಶನದ ಮುಖಾಂತರ ಆಯ್ಕೆ ಮಾಡಿಕೊಳ್ಳಲಾಗುತ್ತದೆ. ಅಭ್ಯರ್ಥಿಗಳು ಅರ್ಜಿಯನ್ನು ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ, ಹುಳುಪಿನಕಟ್ಟೆ, ಆನಗೋಡು, ಇಲ್ಲಿ ಪಡೆದು ದೃಢೀಕೃತ ದಾಖಲೆಗಳೊಂದಿಗೆ ಅಕ್ಟೋಬರ್ 25 ರೊಳಗೆ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:9742313992, 9481867596 ಸಂಪರ್ಕಿಸಿ.

### ಹಿರಿಯ ನಾಗರಿಕರ ಹಕ್ಕುಗಳ ಬಗ್ಗೆ ಕಾನೂನು ಅರಿವು ನೆರವು ಹಾಗೂ ಆರೋಗ್ಯ ತಪಾಸಣಾ ಶಿಬಿರ

# ಸಮಾಜಕ್ಕೆ ಬೇಕು ಹಿರಿಯ ನಾಗರಿಕರ ಮಾರ್ಗದರ್ಶನ: ನ್ಯಾ.ಎಂ.ವಿಜಯ್

» **ಚಿತ್ರದುರ್ಗ**

ಸಮಾಜಕ್ಕೆ ಹಿರಿಯ ನಾಗರಿಕರ ಮಾರ್ಗದರ್ಶನ ಅತ್ಯಗತ್ಯವಾಗಿ ಬೇಕು. ಹಿರಿಯ ನಾಗರಿಕರ ಮಾರ್ಗದರ್ಶನ ಬಹಳಷ್ಟು ಪ್ರಾಮುಖ್ಯತೆಯನ್ನು ಪಡೆದಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.





ನಗರದ ಜಿಲ್ಲಾ ಬಾಲಭವನ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಹಿರಿಯ ನಾಗರಿಕರ ಹಕ್ಕುಗಳ ಬಗ್ಗೆ ಕಾನೂನು ಅರಿವು ನೆರವು ಕಾರ್ಯಕ್ರಮ ಹಾಗೂ ಅರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.ಆರೋಗ್ಯಯುತ ಬದುಕಿನೊಂದಿಗೆ ಸೂಕ್ತ ಮಾರ್ಗದರ್ಶನ ನೀಡುವುದರಿಂದ ಸಮಾಜಕ್ಕೆ ಹೆಚ್ಚು ಲಾಭವಿದೆ. ಸಮಾಜದಲ್ಲಿ ಸ್ವಾಸ್ಥ್ಯ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಹಿರಿಯ ನಾಗರಿಕರ ಪಾತ್ರ ಹೆಚ್ಚು ಪ್ರಾಮುಖ್ಯವಾದುದು ಎಂದರು. ಹಿರಿಯ ನಾಗರಿಕರು ಸದಾ ಚಟುವಟಿಕೆಯಿಂದ ಇದ್ದು, ಸಮಾಜದ ವಿವಿಧ ಸ್ತರಗಳಾದ ಸಾಹಿತ್ಯ ಕ್ಷೇತ್ರ, ಬರವಣಿಗೆಯಲ್ಲಿ ತೊಡಗುವುದು, ಸ್ನೇಹಿತರೊಟ್ಟಿಗೆ ಇರುವುದು, ಸಂಘ ಸಂಸ್ಥೆಗಳಲ್ಲಿ ಭಾಗಿಯಾಗಿ, ಸಮಾಜದ ಉದ್ಧಾರಕ್ಕಾಗಿ ಉತ್ತಮ ಆರೋಗ್ಯದೊಂದಿಗೆ ಜೀವನ ಸಾಗಿಸಬೇಕು ಎಂದು ಸಲಹೆ ನೀಡಿದರು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಮಾತನಾಡಿ, ನಾವು ಎಷ್ಟು ದಿನ ಬದುಕಿದ್ದೇವೋ ಎನ್ನುವುದಕ್ಕಿಂತ ನಾವು ಎಷ್ಟು ಆರೋಗ್ಯಯುತವಾಗಿ ಬದುಕಿದ್ದೇವೆ ಎನ್ನುವುದು ಬಹಳ ಮುಖ್ಯ. ಹಾಗಾಗಿ ಹಿರಿಯ ನಾಗರಿಕರು ಆರೋಗ್ಯ ತಪಾಸಣೆ ಮಾಡಿಕೊಂಡು ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಆರ್.ರಂಗನಾಥ್ ಮಾತನಾಡಿ, 60 ವರ್ಷ ಮೇಲ್ಪಟ್ಟವರಿಗೆ ಮಾನಸಿಕ ಹಾಗೂ ದೈಹಿಕವಾಗಿ ಆರೋಗ್ಯ ಸಮಸ್ಯೆಗಳು ಬರುವುದಕ್ಕೆ ಶುರುವಾಗುತ್ತವೆ. ಇತ್ತೀಚಿನ ದಿನಗಳಲ್ಲಿ ಹಿರಿಯ ನಾಗರಿಕರ ಬಗ್ಗೆ ನಿರ್ಲಕ್ಷ್ಯ ವಹಿಸಲಾಗುತ್ತದೆ. ಹಿರಿಯ ನಾಗರಿಕರ ಆರೋಗ್ಯದ ಹಿತದೃಷ್ಟಿಯಿಂದ ಪ್ರತಿಯೊಬ್ಬರು ಹಿರಿಯ ನಾಗರಿಕರನ್ನು ಚಿಕ್ಕಮಕ್ಕಳಂತೆ ಪಾಲನೆ ಪೋಷಣೆ ಮಾಡುವ ಅಗತ್ಯವಿದೆ ಎಂದರು.

ವೃದ್ಧಾಪ್ಯದಲ್ಲಿ ಕನಿಕರ, ಕರುಣೆ ತೋರಿಸುವುದು ಬೇಡ. ಅವರಿಗೂ ಒಂದು ಜೀವನ ಇರುತ್ತದೆ. ಹಿರಿಯ ನಾಗರಿಕರ ಜೀವನ ಸುಗಮವಾಗಿ ನಡೆಯುವ ನಿಟ್ಟಿನಲ್ಲಿ ಅವರ ಬಗ್ಗೆ ಹೆಚ್ಚಿನ ಕಾಳಜಿ ಹಾಗೂ ಜವಾಬ್ದಾರಿವಹಿಸಬೇಕು ಎಂದರು.

ಬದಲಾದ ಜೀವನಶೈಲಿ, ಆಹಾರಪದ್ಧತಿ, ಮಾನಸಿಕ ಒತ್ತಡ, ಕೆಲಸದ ಒತ್ತಡದಿಂದಾಗಿ ಅಸಾಂಕ್ರಾಮಿಕ ರೋಗಗಳ ಸಂಖ್ಯೆ ಹೆಚ್ಚಾಗುತ್ತಿವೆ. ಹಾಗಾಗಿ ಈ ರೋಗಗಳು ಬರುವುದಕ್ಕಿಂತ ಮುಂಚಿತಗಾಗಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ವಹಿಸಬೇಕಿದೆ ಸಲಹೆ ನೀಡಿದರು.

ಉಪ ಪ್ರಧಾನ ಕಾನೂನು ನೆರವು ಅಭಿರಕ್ಷಕ ಎಂ.ಮೂರ್ತಿ ಅವರು ಹಿರಿಯ ನಾಗರಿಕರ ಹಕ್ಕುಗಳ ಕುರಿತು ಉಪನ್ಯಾಸ ನೀಡಿದರು.ಇದೇ ಸಂದರ್ಭದಲ್ಲಿ ಆರೋಗ್ಯ ಇಲಾಖೆ ಹಾಗೂ ಇಂಡಿಯಾನ ಎಸ್‌ಜೆಎಂ ಹಾರ್ಟ್ ಸೆಂಟರ್‌ನ ತಜ್ಞ ವೈದ್ಯರು ಹಿರಿಯ ನಾಗರಿಕರಿಗಾಗಿ ರಕ್ತದೊತ್ತಡ, ಮಧುಮೇಹ, ನೇತ್ರ ತಪಾಸಣೆ, ರಕ್ತಪರೀಕ್ಷೆ, ದಂತ ತಪಾಸಣೆ ಸೇರಿದಂತೆ ಹಲವು ರೀತಿಯ ಆರೋಗ್ಯ ತಪಾಸಣೆ ನಡೆಸಲಾಯಿತು.

ಕಾರ್ಯಕ್ರಮದಲ್ಲಿ ವಕೀಲರ ಸಂಘದ ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್. ಗಂಗಾಧರ್, ರಾಜ್ಯ ಸರ್ಕಾರಿ ನಿವೃತ್ತ ನೌಕರರ ಜಿಲ್ಲಾ ಸಂಘದ ಅಧ್ಯಕ್ಷ ಆರ್.ರಂಗಪ್ಪ ರೆಡ್ಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ನಿರೂಪಣಾಧಿಕಾರಿ ಪವಿತ್ರ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ. ವೈಶಾಲಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ, ಹೃದಯ ರೋಗ ತಜ್ಞ ಡಾ.ಕಾರ್ತೀಕ್, ವೈದ್ಯರಾದ ಡಾ.ಸಂದೀಪ್, ರಾಜ್ಯ ಸರ್ಕಾರಿ ನೌಕರರ ಸಂಘದ ಸದಸ್ಯರುಗಳು, ಹಿರಿಯ ನಾಗರಿಕರು ಇದ್ದರು.

### ಉತ್ತನಹಳ್ಳಿಯಲ್ಲಿ ಸಂಗೊಳ್ಳಿ ರಾಯಣ್ಣನ ಪ್ರತಿಮೆ ಅನಾವರಣ

## ರಾಯಣ್ಣನ ಹೆಸರಲ್ಲಿ 110 ಎಕರೆಯಲ್ಲಿ ಸೈನಿಕ ಶಾಲೆ

» **ಮೈಸೂರು**

ಸಂಗೊಳ್ಳಿ ರಾಯಣ್ಣ ಹುಟ್ಟಿದ್ದು ಆಗಸ್ಟ್ 15, ನೇಣು ಹಾಕಿದ್ದು ಜನವರಿ 26. ಅಂದೇ ನಮ್ಮ ಸಂವಿಧಾನ ಜಾರಿಗೆ ಬಂದಿತು. ಇದು ಕಾಕತಾಳೀಯವಾದರೂ ಸಂಗೊಳ್ಳಿ ರಾಯಣ್ಣ ಮಹಾನ್ ದೇಶಪ್ರೇಮಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



ಅವರು ಇಂದು ಮೈಸೂರಿನ ಉತ್ತನಹಳ್ಳಿಯ ಶ್ರೀ ಮಾರಮ್ಮ ದೇವಿಯ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದ ಬಳಿಕ ಸಂಗೊಳ್ಳಿ ರಾಯಣ್ಣ ಪ್ರತಿಮೆ ಅನಾವರಣಗೊಳಿಸಿ ಮಾತನಾಡಿದರು.

ರಾಯಣ್ಣ ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದವರು. ಸಂಗೊಳ್ಳಿಯಲ್ಲಿ 110 ಎಕರೆ ಜಾಗ ನೀಡಿ ಅಲ್ಲಿ ಸೈನಿಕ ಶಾಲೆಯನ್ನು ಸಂಗೊಳ್ಳಿ ರಾಯಣ್ಣನ ಹೆಸರಿನಲ್ಲಿ ತೆರೆಯಲಾಗಿದೆ. ರಾಕ್ ಗಾರ್ಡನ್, ವಸ್ತು ಸಂಗ್ರಹಾಲಯ, ಪ್ರಾಧಿಕಾರ ಮಾಡಲಾಗಿದ್ದು 285 ಕೋಟಿ ರೂ.ಗಳ ವೆಚ್ಚದಲ್ಲಿ ಆಗಿದೆ. ಅವರ ಜ್ಞಾಪಕಾರ್ಥವಾಗಿ ಇದನ್ನು ಮಾಡಲಾಗಿದೆ. ಜನರು ಅಲ್ಲಿಗೆ ಭೇಟಿ ನೀಡಬೇಕಂದು ಸಲಹೆ ನೀಡಿದರು.

ಅಪ್ರತಿಮ ದೇಶಭಕ್ತನ ಪ್ರತಿಮೆಯನ್ನು ಸ್ಥಾಪಿಸಿ ಅನಾವರಣವಾಗಿರುವುದು ಸಂತಸದ ಸಂಗತಿ ಎಂದರು.

**ಹೆಲಗೆಹುಂಡಿಗೆ ವಿಶೇಷ ಅನುದಾನ:** ಹೆಲಗೆಹುಂಡಿಯಲ್ಲಿ ಕೆಲಸಗಳಾಗಿಲ್ಲ. ವಿಶೇಷ ಅನುದಾನ ನೀಡಿ ಇಲ್ಲಿನ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು ಎಂದು ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ಭರವಸೆ ನೀಡಿದರು.

### ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆ ನೀಡಿ: ಡಿ.ಹೆಚ್.ಒ



**ಚಿತ್ರದುರ್ಗ:** ಸಮುದಾಯದಲ್ಲಿ ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆ ನೀಡುವುದರ ಮೂಲಕ ಮಲೇರಿಯಾ ಹಾಗೂ ಇತರೆ ಕೀಟ ಜನ್ಯ ರೋಗಗಳಿಂದ ಮಾರಣಾಂತಿಕ ಕಾಯಿಲೆ ತಪ್ಪಿಸಲು ಗುಣಮಟ್ಟದ ಸೇವೆ ನೀಡಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಆರ್.ರಂಗನಾಥ್ ಕರೆ ನೀಡಿದರು. ನಗರದ ಜಿಲ್ಲಾ ಆಸ್ಪತ್ರೆ ಆವರಣದ ಜಿಲ್ಲಾ ತರಬೇತಿ ಕೇಂದ್ರದಲ್ಲಿ ಮಂಗಳವಾರ ರಾಷ್ಟ್ರೀಯ ಆರೋಗ್ಯ ಅಭಿಯಾನ, ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಚೇರಿ ಇವರ ಸಹಯೋಗದೊಂದಿಗೆ ಆರೋಗ್ಯ ನಿರೀಕ್ಷಣಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಹಾಗೂ ಸಮುದಾಯ ಆರೋಗ್ಯಧಿಕಾರಿಗಳಿಗೆ ಎರಡು ದಿನಗಳ ಮಲೇರಿಯಾ ಇತರೆ ಕೀಟಜನ್ಯ ರೋಗಗಳ ಕುರಿತು ತರಬೇತಿ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು. 2025ಕ್ಕೆ ಮಲೇರಿಯಾ ಮುಕ್ತ ಜಿಲ್ಲೆ ಮತ್ತು ರಾಜ್ಯ ಮಾಡುವಲ್ಲಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.ಕಾರ್ಯಕ್ರಮಲ್ಲಿ ಜಿಲ್ಲಾ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಡಾ. ಕಾಶಿ, ಜಿಲ್ಲಾ ಕೀಟಶಾಸ್ತ್ರಜ್ಞಾನ ನಂದಿನಿ ಕಡಿ ಮತ್ತು ಮಲ್ಲಿಕಾರ್ಜುನ, ಹಿರಿಯ ನಿರೀಕ್ಷಣಾಧಿಕಾರಿಗಳಾದ ವಿ. ಶ್ರೀನಿವಾಸ, ಬಿ.ಆರ್. ನಾಗರಾಜು, ಹೆಚ್.ಎ. ನಾಗರಾಜು, ಪಾಂಡು, ಕಾವ್ಯ, ಶ್ರೀಕಾಂತ್ ಇದ್ದರು.

### ಭದ್ರಾ ಬಲದಂಡೆ, ಎಡದಂಡೆ ನಾಲೆಗಳಿಗೆ ನೀರು ಬಿಡುಗಡೆ

**ದಾವಣಗೆರೆ;** 2023-24 ನೇ ಸಾಲಿನಲ್ಲಿ ಭದ್ರಾ ಜಲಾಶಯದ ಮುಂಗಾರು ಬೆಳೆಗಳಿಗೆ ಬಲದಂಡೆ ಹಾಗೂ ಎಡದಂಡೆ ನಾಲೆಗಳಿಗೆ ನೀರನ್ನು ಸರದಿಯನ್ವಯ ಹರಿಸಲಾಗುವುದು ಎಂದು ಕ.ನೀ.ನಿ.ನಿ ಭದ್ರಾ ಯೋಜನಾ ವೃತ್ತದ ಅಧೀಕ್ಷಕ ಅಭಿಯಂತರರು ಹಾಗೂ ಭದ್ರಾ ಯೋಜನಾ ನೀರಾವರಿ ಸಲಹಾ ಸಮಿತಿ ಸದಸ್ಯ ಕಾರ್ಯದರ್ಶಿ ಸುಜಾತ ತಿಳಿಸಿದ್ದಾರೆ. ಭದ್ರಾ ಬಲದಂಡೆ ನಾಲೆಗಳಿಗೆ ಸೆಪ್ಟೆಂಬರ್ 26 ರಿಂದ ಅಕ್ಟೋಬರ್ 15 ರವರೆಗೆ ಒಟ್ಟು 20 ದಿನಗಳು ಹಾಗೂ ಅಕ್ಟೋಬರ್ 26 ರಿಂದ ನವೆಂಬರ್ 17 ರವರೆಗೆ ಒಟ್ಟು 23 ದಿನಗಳು ನೀರನ್ನು ಹರಿಸಲಾಗುವುದು.ಭದ್ರಾ ಎಡದಂಡೆ ನಾಲೆಗಳಿಗೆ ಈಗಾಗಲೇ ನೀರನ್ನು ಹರಿಸಲಾಗಿದ್ದು, ಅಕ್ಟೋಬರ್ 1 ರವರೆಗೆ ಒಟ್ಟು 15 ದಿನಗಳು ನೀರನ್ನು ಹರಿಸಲಾಗುತ್ತದೆ. ನಂತರ ಅಕ್ಟೋಬರ್ 12 ರಿಂದ 26 ರವರೆಗೆ ಒಟ್ಟು 15 ದಿನಗಳು ಹಾಗೂ ನವೆಂಬರ್ 6 ರಿಂದ 17 ರವರೆಗೆ ಒಟ್ಟು 12 ದಿನಗಳು ನೀರನ್ನು ಹರಿಸಲಾಗುದು ಎಂದು ಅವರು ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಕಟ್ಟಡ ಕಾರ್ಮಿಕರ ಪ್ರತಿಭಟನೆ

» **ಚಿತ್ರದುರ್ಗ**

ಕಟ್ಟಡ ನಿರ್ಮಾಣ ಕಾರ್ಮಿಕರಿಗೆ ಶೈಕ್ಷಣಿಕ ಸಹಾಯಧನ ಬಿಡುಗಡೆಗೆ ಒತ್ತಾಯಿಸಿ ಕಾರ್ಮಿಕ ನಿರೀಕ್ಷಕರ ಕಚೇರಿ ಎದುರು ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಫೆಡರೇಷನ್ ವತಿಯಿಂದ ಮಂಗಳವಾರ ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಲಾಯಿತು.




2022-23 ನೇ ಸಾಲಿನಲ್ಲಿ ಶೈಕ್ಷಣಿಕ ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸಿದ ಕಾರ್ಮಿಕರಿಗೆ ಇದುವರೆವಿಗೂ ಸಹಾಯಧನ ಬಿಡುಗಡೆಯಾಗಿಲ್ಲ ಎಂದು ಪ್ರತಿಭಟನಾಕಾರರು ಸರ್ಕಾರದ ವಿರುದ್ಧ ಧಿಕ್ಕಾರಗಳನ್ನು ಕೂಗಿದರು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಫೆಡರೇಷನ್ ರಾಜ್ಯ ಉಪಾಧ್ಯಕ್ಷ ಸಿ.ಕೆ.ಗೌಸ್‌ಪೀರ್ ಮಾತನಾಡಿ ಶೈಕ್ಷಣಿಕ ಧನ ಸಹಾಯವನ್ನು ಕೂಡಲೆ ಬಿಡುಗಡೆಗೊಳಿಸಬೇಕು. 2021-22 ನೇ ಸಾಲಿನಲ್ಲಿ 1.5 ಲಕ್ಷ ಫಲಾನುಭವಿಗಳಿಗೆ ಬಾಕಿ ಉಳಿಸಿಕೊಂಡಿರುವ ಶೈಕ್ಷಣಿಕ ಧನ ಸಹಾಯವನ್ನು ತುರ್ತಾಗಿ ನೀಡಬೇಕು. ಇಪ್ಪತ್ತೈದು ಸಾವಿರ ರೂ. ಬೆಲೆ ಬಾಳುವ ಲ್ಯಾಪ್‌ಟಾಪನ್ನು 75 ಸಾವಿರ ರೂ.ಗಳಿಗೆ ಖರೀಧಿಸಿ ಅವ್ಯವಹಾರ ಎಸಗಿರುವುದನ್ನು ತನಿಖೆ ನಡೆಸಿ ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸಬೇಕು. ಹಿಂದಿನ ಬಿ.ಜೆ.ಪಿ.ಸರ್ಕಾರದಲ್ಲಿ ಖರೀಧಿಯಲ್ಲಾಗಿರುವ ಅಕ್ರಮವನ್ನು ತನಿಖೆಗೆ ಆದೇಶಿಸಿ ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವವರ ಮೇಲೆ ಕಾನೂನು ರೀತಿ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

ಮದುವೆ, ಪಿಂಚಣಿ, ವೈದ್ಯಕೀಯ ಸೌಲಭ್ಯಗಳಿಗೆ ಸಲ್ಲಿಸಿರುವ ನೂರಾರು ಅರ್ಜಿಗಳು ಇತ್ಯರ್ಥವಾಗದೆ ಬಾಕಿ ಉಳಿದಿರುವುದನ್ನು ಪುರಸ್ಕರಿಸಿ ಹಣ ಪಾವತಿಸಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದೆಂದು ರಾಜ್ಯ ಸರ್ಕಾರಕ್ಕೆ ಎಚ್ಚರಿಸಿದರು.

ಜಿಲ್ಲಾ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಜಿಲ್ಲಾ ಸಮಿತಿ ಅಧ್ಯಕ್ಷ ಬಿ.ಸಿ.ನಾಗರಾಜಚಾರಿ, ಖಜಾಂಚಿ ಉಮೇಶ್, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಸಣ್ಣಮ್ಮ, ತಾಲ್ಲೂಕು ಸಹ ಕಾರ್ಯದರ್ಶಿ ಧರ್ಮಣ್ಣ, ಜಿಲ್ಲಾ ಸಹ ಕಾರ್ಯದರ್ಶಿ ಭಾಸ್ಕರಾಚಾರಿ, ಅಬ್ದುಲ್ಲಾ, ಜಿಕ್ರಿಯ, ರಾಘವೇಂದ್ರ, ಇಸ್ಮಾಯಿಲ್, ಕಂಪಳಪ್ಪ, ರಂಗಸ್ವಾಮಿ, ಮಲ್ಲಿಕಾರ್ಜುನ್, ದ್ರಾಕ್ಷಾಯಣಮ್ಮ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T